ಸಂಪುಟ 01 | ಸಂಚಿಕೆ 180 ಶುಕ್ರವಾರ 04 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1)World Sexual Health Day ವಿಶ್ವ ಲೈಂಗಿಕ ಆರೋಗ್ಯ ದಿನ

ಲೈಂಗಿಕ ಆರೋಗ್ಯ, ಸುರಕ್ಷತೆ, ಗೌರವ ಮತ್ತು ಆರೋಗ್ಯಕರ ಸಂಬಂಧಗಳ ಕುರಿತು ಜಾಗೃತಿ ಮೂಡಿಸುವ ದಿನ. ಯುವಜನರಲ್ಲಿ ಸರಿಯಾದ ಆರೋಗ್ಯ ಮಾಹಿತಿ ಮತ್ತು ಜವಾಬ್ದಾರಿಯುತ ಅರಿವು ಬೆಳೆಸುವ ಮಹತ್ವವನ್ನು ಈ ದಿನ ಒತ್ತಿಹೇಳುತ್ತದೆ.

2)National Food Bank Day ಅನ್ನು 2026ರ ಸೆಪ್ಟೆಂಬರ್ 4, ಶುಕ್ರವಾರ ಆಚರಿಸಲಾಗುತ್ತದೆ. ಇದು ಪ್ರತಿವರ್ಷ ಸೆಪ್ಟೆಂಬರ್‌ನ ಮೊದಲ ಶುಕ್ರವಾರ ಬರುತ್ತದೆ.

3)National Wildlife Day ರಾಷ್ಟ್ರೀಯ ವನ್ಯಜೀವಿ ದಿನ

ವನ್ಯಜೀವಿಗಳು ಮತ್ತು ಅವುಗಳ ನೈಸರ್ಗಿಕ ಆವಾಸಸ್ಥಾನಗಳನ್ನು ಸಂರಕ್ಷಿಸುವ ಅಗತ್ಯವನ್ನು ಜನರಿಗೆ ತಿಳಿಸುವ ದಿನ. ಅಪರೂಪದ ಪ್ರಾಣಿಗಳು, ಪಕ್ಷಿಗಳು ಮತ್ತು ಪರಿಸರ ವ್ಯವಸ್ಥೆಗಳನ್ನು ರಕ್ಷಿಸುವ ಬಗ್ಗೆ ಜಾಗೃತಿ ಮೂಡಿಸುವುದು ಇದರ ಪ್ರಮುಖ ಉದ್ದೇಶ.

## ಸುಭಾಷಿತ

ಸಹಜೀವಿಯನ್ನು ಹೀನಾಯವಾಗಿ ಕಾಣುವವರು ಎಂದಿಗೂ ಶ್ರೇಷ್ಠತೆಯನ್ನು ಪಡೆಯಲಾರರು.

ರವೀಂದ್ರನಾಥ ಟ್ಯಾಗೋರ್

## ರೈತರ ಸಮಸ್ಯೆ ಚರ್ಚಿಸಲು ವಿಶೇಷ ಅಧಿವೇಶನ ಕರೆಯಿರಿ:

# ಸರ್ಕಾರಕ್ಕೆ ವಿಜಯೇಂದ್ರ ಒತ್ತಾಯ

ನೈಜ್ಯ ದೇಸೆ ನ್ಯೂಸ್

ರಾಯಚೂರು: ಎಸ್‌ಸಿಪಿ-ಟಿಎಸ್‌ಪಿ ಹಣವನ್ನು ಗ್ಯಾರಂಟಿಗಳಿಗೆ ಬಳಸುತ್ತಿದೆ. ಬರಪೀಡಿತ ರೈತರ 5 ಲಕ್ಷದವರೆಗೆ ಬೆಳೆ ಸಾಲ ಮನ್ನಾ ಮಾಡಿ, ರೈತರ ಸಮಸ್ಯೆ ಚರ್ಚಿಸಲು ವಿಶೇಷ ಅಧಿವೇಶನ ಕರೆಯಿರಿ ಎಂದು ಬಿಜೆಪಿ ರಾಜ್ಯಧ್ಯಕ್ಷ ಬಿ,ವೈ ವಿಜಯೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬಿಜೆಪಿಯ ಮೂರನೇ ದಿನದ ಪಾದಯಾತ್ರೆಗೆ ಚಾಲನೆ ನೀಡುವ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ವೈಫಲ್ಯಗಳು, ದಲಿತರು ಹಾಗೂ ಶೋಷಿತ ಸಮುದಾಯಗಳನ್ನು ಕೇವಲ ಓಟ್ ಬ್ಯಾಂಕ್ ಆಗಿ ಬಳಸಿಕೊಳ್ಳುತ್ತಿದೆ. ದಲಿತರ ಅಭಿವೃದ್ಧಿಗಾಗಿ ಮೀಸಲಿಟ್ಟಿರುವ ಎಸ್‌ಸಿಪಿ-ಟಿಎಸ್‌ಪಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ರಾಜ್ಯದ ಅನ್ನದಾತ ಗಂಭೀರ ಸಂಕಷ್ಟದಲ್ಲಿ ಸಿಲುಕಿದ್ದರೂ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 3,655 ರೈತರು ಆತಹತ್ಯೆಗೆ ಶರಣಾಗಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲೇ 937 ರೈತರು ಆತಹತ್ಯೆ ಮಾಡಿಕೊಂಡಿದ್ದಾರೆ. ಕಲಬುರಗಿಯಲ್ಲಿ 295, ರಾಯಚೂರಿನಲ್ಲಿ 169, ಬೀದರ್ 220 ಹಾಗೂ ಕೊಪ್ಪಳದಲ್ಲಿ 80ಕ್ಕೂ ಹೆಚ್ಚು ರೈತರ ಆತಹತ್ಯೆ ಪ್ರಕರಣಗಳು ನಡೆದಿವೆ. ಈ ಅಂಕಿ-ಅಂಶಗಳು



ಸರ್ಕಾರದ ರೈತ ವಿರೋಧಿ ಧೋರಣೆಯನ್ನು ತೋರಿಸುತ್ತವೆ ಎಂದು ಕಿಡಿಕಾರಿದರು.

ಪ್ರಿಯಾಂಕ್ ಖರ್ಗೆ ಅವರೇ, ಕಲಬುರಗಿ ಜಿಲ್ಲೆಯಲ್ಲೇ 295 ರೈತರು ಆತಹತ್ಯೆ ಮಾಡಿಕೊಂಡಿರುವ ವಿಚಾರವನ್ನು ಗಂಭೀರವಾಗಿ ಗಮನಿಸಬೇಕು. ಅನ್ನದಾತನ ಸಂಕಷ್ಟಕ್ಕೆ ಸರ್ಕಾರ ಮಿಡಿಯುವ ಕಾಳಜಿ ತೋರಬೇಕು ಎಂದು ವಿಜಯೇಂದ್ರ ಹೇಳಿದರು. ರಾಜ್ಯದ ಸುಮಾರು 190ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗಿದ್ದು, ಬರಪೀಡಿತ ಪ್ರದೇಶಗಳ ರೈತರ ಬೆಳೆ ಸಾಲವನ್ನು 5 ಲಕ್ಷದವರೆಗೆ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ಜೋಳದ ಬೆಂಬಲ ಬೆಲೆಯ ಸುಮಾರು 145 ಕೋಟಿ ಬಾಕಿ ಇದ್ದು, ಅದನ್ನು ಕೂಡಲೇ ರೈತರಿಗೆ ಪಾವತಿಸಬೇಕು. ಹೈನುಗಾರರಿಗೆ ನೀಡಬೇಕಾದ ಪ್ರೋತ್ಸಾಹಧನವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡಲಾಗುತ್ತಿತ್ತು. ಈಗ ಆ ಪ್ರೋತ್ಸಾಹಧನ ಕೂಡ ಬಿಡುಗಡೆಯಾಗುತ್ತಿಲ್ಲ. ರೈತರ ಬದುಕಿನೊಂದಿಗೆ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿದರು.

ನಾಡಿನ ರೈತರ ಸಮಸ್ಯೆಗಳ ಕುರಿತು ಸಮಗ್ರವಾಗಿ ಚರ್ಚಿಸಲು ರಾಜ್ಯ ಸರ್ಕಾರ ವಿಶೇಷ ಅಧಿವೇಶನವನ್ನು ಕರೆಯಬೇಕು. ಹೊಸಪೇಟೆ ಡ್ಯಾಂನಲ್ಲಿ ಹೂಳೆತ್ತುವ ಕಾರ್ಯ ಕೈಗೊಳ್ಳಬೇಕು. 31 ಟಿಎಂಸಿ ನೀರನ್ನು ಹಿಡಿದಿಟ್ಟುಕೊಳ್ಳುವ ಉದ್ದೇಶದಿಂದ ಸಮಾನಾಂತರ ಹಂಚಿಕೆ ವ್ಯವಸ್ಥೆಗೆ ನವಲೆ ಜಲಾಶಯಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಿಯಲ್ ಎಸ್ಟೇಟ್ ವಿಚಾರಗಳ ಬಗ್ಗೆ ಹೆಚ್ಚು ಗಮನ ಹರಿಸುತ್ತಿದ್ದಾರೆ ಎಂದು ಟೀಕಿಸಿದ ವಿಜಯೇಂದ್ರ, ಈಗಲಾದರೂ ಕನಿಷ್ಠ ಶೇ.25ರಷ್ಟು ಗಮನವನ್ನು ಅನ್ನದಾತನ ಸಮಸ್ಯೆಗಳ ಕಡೆಗೆ ಹರಿಸಿ ಎಂದು ಹೇಳಿದರು. ಮುಖ್ಯಮಂತ್ರಿಗಳೇ, ರೈತರ ಸಮಸ್ಯೆಗಳ ಬಗ್ಗೆ ಗಮನಹರಿಸಿ ರಾಜ್ಯದ ರೈತರು ಸಂಕಷ್ಟದಲ್ಲಿದ್ದಾರೆ. ಅವರ ಸಮಸ್ಯೆಗಳಿಗೆ ಪರಿಹಾರ ನೀಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು ಎಂದರು.

ಬಿಜೆಪಿ ಪಾದಯಾತ್ರೆ ಸಾಗುವ ಮಾರ್ಗದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಕಪ್ಪು ಬಾವುಟ ಪ್ರದರ್ಶಿಸಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಆರ್.ಬಿ. ಹರಿಪ್ರಸಾದ್ ಕರೆ ನೀಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಪಾದಯಾತ್ರೆಯನ್ನು ತಡೆಯುವುದಾದರೆ ತಡೆಯಿರಿ. ನಮನ್ನು ಗಲ್ಲಿಗೇರಿಸಿದರೂ ಪರವಾಗಿಲ್ಲ. ಆದರೆ ಮೊದಲು ರೈತರ ಸಮಸ್ಯೆಗಳಿಗೆ ಸ್ಪಂದಿಸಿ ಎಂದು ತಿರುಗೇಟು ನೀಡಿದರು.

## ಕ್ಷಯ ರೋಗಿಗಳನ್ನು ದತ್ತು ಪಡೆಯರಿ -ಟಿ ಎಚ್ ಓ ವಿನೋದ್ ಕುಮಾರ್

ನೈಜ್ಯ ದೇಸೆ ನ್ಯೂಸ್

ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯನಗರ ಮತ್ತು ಜಿಲ್ಲಾ ಕ್ಷಯರೋಗ ನಿರ್ಮೂಲನ ಕಚೇರಿ ವಿಜಯನಗರ ಹಾಗೂ ತಾಲೂಕು ಅರೋಗ್ಯದಿಕಾರಿಗಳ ಕಚೇರಿ ಹೊಸಪೇಟೆ ಮತ್ತು ಎಸ್ ವಿ ವೈ ಎಮ್ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಪೌಷ್ಟಿಕ ಆಹಾರ ಸೇವೆನಗಾಗಿ ಟಿಬಿ ಮುಕ್ತ ಭಾರತ ಅಭಿಯಾನ್ ಅಡಿಯಲ್ಲಿ ಎಸ್ ವಿ ವೈ ಎಂ ಸಂಸ್ಥೆ ಯವರು ಮೂರು ಕ್ಷಯರೋಗಿಗಳನ್ನು ಆರು ತಿಂಗಳ ವರಿಗೆ ದತ್ತು ಪಡೆದರು.

ತಾಲೂಕ ಆರೋಗ್ಯದಿಕಾರಿಗಳು ಮಾತನಾಡಿ ತಾಲೂಕಿನಲ್ಲಿ ಸ್ವಯಂ ಸೇವಕರು, ಸಂಘ ಸಂಸ್ಥೆಯವರು,ಎನ್ ಜಿ ಓ ಸಂಸ್ಥೆ ಯವರು, ಸಮೂದಾಯದ ಎಲ್ಲಾ ವರ್ಗದವರು ಕ್ಷಯಮುಕ್ತ ವಿಜಯನಗರ ಜಿಲ್ಲೆಗೆ ಕೈ ಜೋಡಿಸಬೇಕೆಂದು ಮನವಿ ಮಾಡಿಕೊಂಡರು. ಈ ಕಾರ್ಯಕ್ರಮದಲ್ಲಿ ತಾಲೂಕು ಅರೋಗ್ಯಧಿಕಾರಿಗಳು ವಿನೋದ್ ಕುಮಾರ್, ತಾಲೂಕು ಕ್ಷಯರೋಗ ಮೇಲ್ವಿಚಾರಕಿ ನಫೀಸಾ ಬಾನು,ಕಾಸಿಂ ಸಾಬ್, ಫಾರ್ಮಸಿ ಅಧಿಕಾರಿ ಚನ್ನಬಸಪ್ಪ,ಜಿಲ್ಲಾ ಪಿ ಪಿ ಎಂ ಯಂಕಪ್ಪ,ರಾಘುವೇಂದ್ರ



ಎಲ್ಲಾ ಸಿಬ್ಬಂದಿ ಹಾಜರಿದ್ದರು.

## ದ್ಯಾವಮ್ಮ ಮತ್ತು ಮಾರೆಮ್ಮ ದೇವಿಯ ಗಂಗೆಸ್ಥಳ ಮಹೋತ್ಸವ ಸಂಭ್ರಮ

ನೈಜ್ಯ ದೇಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ತಾಲೂಕು ಸಮೀಪದ ಚಿಕ್ಕಜಂತಕಲ್ ಗ್ರಾಮದಲ್ಲಿ ಭಕ್ತರ ಆರಾಧ್ಯ ದೇವರಾದ ಶ್ರೀ ದ್ಯಾವಮ್ಮ ಮತ್ತು ಮಾರೆಮ್ಮ ದೇವಿಯ ಗಂಗೆಸ್ಥಳ ಮಹೋತ್ಸವ ಅತ್ಯಂತ ಸಡಗರ ಸಂಭ್ರಮ ಮತ್ತು ಶ್ರದ್ಧಾಭಕ್ತಿಯಿಂದ ಶುಭ ಮಂಗಳವಾರದಂದು ಜರುಗಿತು.

ಬೆಳಿಗ್ಗೆ ದ್ಯಾವಮ್ಮ ಮತ್ತು ಮಾರೆಮ್ಮ ದೇವಸ್ಥಾನದಲ್ಲಿ ಪೂಜಾರಿಗಳಾದ ಅಂಬಣ್ಣ, ಯಂಕೋಬ ನೇತೃತ್ವದಲ್ಲಿ ವಿಶೇಷ ಅಲಂಕಾರ, ಕುಂಕುಮಾರ್ಚನೆ, ಮಹಾಮಂಗಳಾರತಿ ಸೇರಿದಂತೆ ನಾನಾ ಧಾರ್ಮಿಕ ಕಾರ್ಯಕ್ರಮಗಳು ಶಾಸ್ತ್ರೋಕ್ತವಾಗಿ ನೆರವೇರಿದವು. ಇಲ್ಲಿನ ದೇವಸ್ಥಾನಗಳಲ್ಲಿ ಅಲಂಕೃತಗೊಂಡ ಪಲ್ಲಕ್ಕಿ ಉತ್ಸವದಲ್ಲಿ ದ್ಯಾವಮ್ಮ ಮತ್ತು ಮಾರೆಮ್ಮ ದೇವಿ ಮೂರ್ತಿ ಕೂರಿಸಲಾಗಿತ್ತು. ನಂತರ ಭಕ್ತರು ಹಾಗೂ ಜನರು ದೇವಿಯರ ದೇವಸ್ಥಾನಕ್ಕೆ ತೆರಳಿ, ಕಾಯಿ, ಕರ್ಪೂರ, ನೈವೇದ್ಯ ಅರ್ಪಿಸುವ ಮೂಲಕ ದೇವರ ದರ್ಶನ ಪಡೆದು ಪುನೀತರಾದರು.

ತದನಂತರ ಪಲ್ಲಕ್ಕಿ ಉತ್ಸವದಲ್ಲಿ ದೇವರನ್ನು ಕೂರಿಸಿ ಹೆಗಲ ಮೇಲೆ ಹೊತ್ತುಕೊಂಡು ಪಕ್ಕದ ತುಂಗಭದ್ರ ನದಿ ತೀರಕ್ಕೆ ತೆರಳಿದರು. ಗಂಗೆಪೂಜೆ, ಗಂಗೆ



ಆರತಿ ಸೇರಿದಂತೆ ನಾನಾ ಧಾರ್ಮಿಕ ಕೈಂಕಾರ್ಯಗಳು ಶ್ರದ್ಧೆಯಿಂದ ನಡೆದವು. ತದನಂತರ ಇಲ್ಲಿನ ತುಂಗಭದ್ರ ನದಿ ತಟದಿಂದ ಆರಂಭಗೊಂಡ ಗಂಗೆಸ್ಥಳ ಭವ್ಯ ಮೆರವಣಿಗೆ ಗ್ರಾಮದ ಎದುರು ಬಸವೇಶ್ವರ ದೇವಸ್ಥಾನ, ಹುಸೇನ್ ಬಾಷಾ ದೇವಸ್ಥಾನ, ಪಂಪಾಪತಿ ದೇವಸ್ಥಾನ, ವಾಲ್ಮೀಕಿ ನಾಯಕ ಓಣಿ ಮುಖಾಂತರ ತಡರಾತ್ರಿವರೆಗೂ ದೇವಿಯರ ಹೇಳಿಕೆ(ಕಾರಣಿಕ) ಕೇಳುವ ಮೂಲಕ ಭಕ್ತರು ದೇವರಲ್ಲಿ ಇಷ್ಟಾರ್ಥ ಪ್ರಾಪ್ತಿಗಾಗಿ ಬೇಡಿಕೊಂಡರು. ನಂತರ ಆಯಾ ದೇವಾಲಯದಲ್ಲಿ ಮೆರವಣಿಗೆ ಸಂಪನ್ನಗೊಂಡಿತು. ಈ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ತಾಷಾರಾಂಡೋಲ್, ಮಂಗಳವಾದ್ಯ ಸೇರಿದಂತೆ ವಿವಿಧ ಕಲಾಪ್ರಕಾರಗಳು ಪಾಲ್ಗೊಂಡಿದ್ದರು. ಗಂಗೆಸ್ಥಳ ಮಹೋತ್ಸವ ಹಿನ್ನಲೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಅತ್ಯಾಕರ್ಷಣೆಯ ವಿದ್ಯುತ್ ದೀಪಗಳಿಂದ ಅಲಂಕಾರಿಸಲಾಗಿತ್ತು. ಈ ಸಂದರ್ಭದಲ್ಲಿ ಸ್ಥಳೀಯ ಮತ್ತು ಸುತ್ತಮುತ್ತಲಿನ ಸದ್ಭಕ್ತರು ಪಾಲ್ಗೊಂಡಿದ್ದರು.

## ಸೆ.5ರಂದು ಚಿಕ್ಕವಂಕಲಕುಂಟಾದಲ್ಲಿ ಪ್ರಜಾಸೇವಾ ಆಂದೋಲನ ಸಭೆ

ನೈಜ್ಯ ದೇಸೆ ನ್ಯೂಸ್

ಯಲಬುರ್ಗಾ: ಸಾರ್ವಜನಿಕರ ಕುಂದು-ಕೊರತೆ ಹಾಗೂ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸೆ.5ರಂದು ಯಲಬುರ್ಗಾ ತಾಲೂಕಿನ ಚಿಕ್ಕವಂಕಲಕುಂಟಾ ಗ್ರಾಮದ ಬುದ್ಧ-ಬಸವ-ಅಂಬೇಡ್ಕರ್ ಭವನದಲ್ಲಿ ಪ್ರಜಾಸೇವಾ ಆಂದೋಲನ ಸಭೆ ನಡೆಯಲಿದೆ.



ಬೆಳಿಗ್ಗೆ 10ರಿಂದ ಸಂಜೆ 4.30ರವರೆಗೆ ಸಭೆ ನಡೆಯಲಿದ್ದು, ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅರ್ಜಿಗಳನ್ನು ಸಲ್ಲಿಸಲು ಸಹ ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ ಹಾಗೂ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಪೌಷ್ಟಿಕ ಆಹಾರ ಸಪ್ತಾಹ ಕಾರ್ಯಕ್ರಮ ಆಚರಣೆ

## ನಿಮ್ಮ ಆರೋಗ್ಯ ನಿಮ್ಮ ತಟ್ಟೆಯಲ್ಲಿನ ಆಹಾರದಿಂದ ಪ್ರಾರಂಭವಾಗುತ್ತದೆ

ನೈಜ್ಯ ದೇಸೆ ನ್ಯೂಸ್

ಸಿಂಧನೂರು, ಸೆಪ್ಟೆಂಬರ್ 03: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಿಂಧನೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಹಾಗೂ ಜಾಗೃತಿ ಮಹಿಳಾ ಸಂಘಟನೆ ಪೋತ್ನಾಳ ಇವರ ಸಂಯುಕ್ತ ಆಶ್ರಯದಲ್ಲಿ ಅಮೃತ ನಗರದ ಅಂಗನವಾಡಿ ಕೇಂದ್ರದಲ್ಲಿ ಪೌಷ್ಟಿಕ ಆಹಾರ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು, “ನಿಮ್ಮ ಆರೋಗ್ಯ ನಿಮ್ಮ ತಟ್ಟೆಯಲ್ಲಿನ ಆಹಾರದಿಂದ ಪ್ರಾರಂಭವಾಗುತ್ತದೆ” ಎಂಬ ಸಂದೇಶದೊಂದಿಗೆ ಪೌಷ್ಟಿಕ ಆಹಾರದ ಮಹತ್ವವನ್ನು ವಿವರಿಸಿದರು. ತಾಯಂದಿರು ತಮ್ಮ ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗಾಗಿ ಹುಟ್ಟಿನಿಂದ ಆರು ತಿಂಗಳವರೆಗೆ ಕೇವಲ ಎದೆಹಾಲನ್ನೇ ನೀಡಬೇಕು ಹಾಗೂ ಯಾವುದೇ ಹೊರಗಿನ ಆಹಾರವನ್ನು ನೀಡಬಾರದು ಎಂದು ತಿಳಿಸಿದರು. ಆರು ತಿಂಗಳ ನಂತರ ಮಕ್ಕಳಿಗೆ ಪೌಷ್ಟಿಕಯುಕ್ತ ಪೂರಕ ಆಹಾರವನ್ನು ನೀಡುವಂತೆ ಸಲಹೆ ನೀಡಿದರು. ಗರ್ಭಿಣಿಯರು ತಮ್ಮ ಹಾಗೂ ಭ್ರೂಣದ ಆರೋಗ್ಯಕರ ಬೆಳವಣಿಗೆಗಾಗಿ ಅಂಗನವಾಡಿ ಕೇಂದ್ರದಲ್ಲಿ ದೊರೆಯುವ ಪೌಷ್ಟಿಕ ಆಹಾರವನ್ನು ಸೇವಿಸಬೇಕು.

ಆರೋಗ್ಯ ಇಲಾಖೆಯಿಂದ ನೀಡಲಾಗುವ ಐರನ್, ಫೋಲಿಕ್ ಆಸಿಡ್ ಹಾಗೂ ಕ್ಯಾಲ್ಸಿಯಂ ಮಾತ್ರೆಗಳನ್ನು ನಿಯಮಿತವಾಗಿ ಸೇವಿಸುವುದರೊಂದಿಗೆ ಗರ್ಭಾವಸ್ಥೆಯಲ್ಲಿ ಅಗತ್ಯ ಆರೋಗ್ಯ ತಪಾಸಣೆಗಳನ್ನು ಮಾಡಿಸಿಕೊಳ್ಳಬೇಕು ಎಂದು ಹೇಳಿದರು. ಆರೋಗ್ಯವಂತ ತಾಯಿಯಿಂದ ಆರೋಗ್ಯವಂತ ಮಗುವನ್ನು ಪಡೆಯಲು ಉತ್ತಮ ಆಹಾರ ಮತ್ತು ಸೂಕ್ತ ಆರೈಕೆ ಅತ್ಯಗತ್ಯ ಎಂದು ತಿಳಿಸಿದರು. ನಂತರ ಮಾತನಾಡಿದ ಜಾಗೃತಿ ಮಹಿಳಾ ಸಂಘಟನೆಯ ಸದಸ್ಯೆ ಆರೋಗ್ಯಮ್ಮ ಅವರು, ತಾಯಂದಿರು ಗರ್ಭಿಣಿ ಹಾಗೂ ಬಾಣಂತಿ ಅವಧಿಯಲ್ಲಿ ಉತ್ತಮ ಪೌಷ್ಟಿಕ ಆಹಾರವನ್ನು ಸೇವಿಸುವ ಮೂಲಕ ತಮ್ಮ ಮತ್ತು ಮಗುವಿನ



ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು. ರಕ್ತಹೀನತೆಯನ್ನು ತಡೆಗಟ್ಟಲು ಐರನ್ ಸಮೃದ್ಧವಾಗಿರುವ ಹಸಿರು ಸೊಪ್ಪುಗಳು, ಹಣ್ಣುಗಳು, ತರಕಾರಿಗಳು, ಬೆಲ್ಲ, ಶೇಂಗಾ ಹಾಗೂ ಇತರ ಪೌಷ್ಟಿಕ ಆಹಾರಗಳನ್ನು ಸೇವಿಸಬೇಕು ಎಂದು ಸಲಹೆ ನೀಡಿದರು.

ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಕಡಿಮೆ ಮಾಡಲು ಪೌಷ್ಟಿಕ ಆಹಾರ ಸೇವನೆ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ನಿಂಗಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್, ಅಂಗನವಾಡಿ ಕಾರ್ಯಕರ್ತೆ ಆರೋಗ್ಯಮ್ಮ, ಆಶಾ ಕಾರ್ಯಕರ್ತೆ ಸುಜಾತ, ತಾಯಂದಿರಾದ ಅನಿತಾ, ಮಹೇಶ್ವರಿ, ಸುಪ್ರೀತಾ, ಅಮೃತಮ್ಮ, ಎಲ್ಲಮ್ಮ, ದುರ್ಗಮ್ಮ, ನಿರ್ಮಲಾ, ಆರೋಗ್ಯಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ಕನಸಿಗೆ ರೆಕ್ಕೆ ಕಟ್ಟಿದ ದಿನ

ಕನಸಿಗೆ ರೆಕ್ಕೆ ಕಟ್ಟಿದ ದಿನ,
ಮನಸಿಗೆ ಹೊಸ ದಾರಿ ಸಿಕ್ಕಿತು,
ಕತ್ತಲೆಯ ದಾರಿಯ ನಡುವೆಯೂ,
ಭರವಸೆಯ ಬೆಳಕು ಹೊತ್ತಿತು.

ನಿನ್ನೆ ಕಂಡ ಕನಸು ಇಂದು,
ನನ್ನ ಕಣ್ಣ ಮುಂದೆ ನಿಂತಿತು,
ಸೋಲಿನ ನೆರಳು ದೂರ ಸರಿದು,
ಗೆಲುವಿನ ಹೆಜ್ಜೆ ಜೊತೆಯಾಯಿತು.

ಸಣ್ಣ ಆಸೆಯೊಂದು ಹೃದಯದಲ್ಲಿ,
ದೊಡ್ಡ ಗುರಿಯಾಗಿ ಅರಳಿತು,
ಪ್ರತಿ ಹೆಜ್ಜೆಯ ಪ್ರಯತ್ನದಿಂದ,
ಹೊಸ ಲೋಕವೊಂದು ತೆರೆದಿತು.

ಗಾಳಿಯಂತೆ ಮುಕ್ತವಾಗಿ,
ಆಕಾಶದಂತೆ ವಿಶಾಲವಾಗಿ,
ಕನಸು ಹಾರಿತು ದೂರದ ಕಡೆ,
ನನ್ನ ನಂಬಿಕೆಯ ರೆಕ್ಕೆಗಳಲಿ.

ಕನಸಿಗೆ ರೆಕ್ಕೆ ಕಟ್ಟಿದ ದಿನ,
ಜೀವನವೇ ಹೊಸ ಕಾವ್ಯವಾಯಿತು,
"ನಾನು ಮಾಡಬಲ್ಲೆ" ಎಂಬ ನಂಬಿಕೆ,
ನನ್ನೊಳಗಿನ ಶಕ್ತಿಯಾಯಿತು

## ಕುಷ್ಟಗಿ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಲಕಿಯರ ಸರ್ಕಾರಿ ಪಿಯು ಕಾಲೇಜು ವಿದ್ಯಾರ್ಥಿನಿಯರ ಅಮೋಘ ಸಾಧನೆ

# ವಿವಿಧ ಕ್ರೀಡಾ ವಿಭಾಗಗಳಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ; 'ವೀರಾಗ್ರಣಿ' ಪ್ರಶಸ್ತಿಗೆ ಭಾಗ್ಯಲಕ್ಷ್ಮಿ ಮೇಟಿ

❏ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: 2026–27ನೇ ಸಾಲಿನ ಕುಷ್ಟಗಿ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಕುಷ್ಟಗಿಯ ವಿದ್ಯಾರ್ಥಿನಿಯರು ವಿವಿಧ ಕ್ರೀಡಾ ವಿಭಾಗಗಳಲ್ಲಿ ಗಮನಾರ್ಹ ಸಾಧನೆ ಮಾಡುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ.**

ಆಗಸ್ಟ್ 31ರಂದು ಸರ್ಕಾರಿ ಪದವಿ ಪೂರ್ವ ಕಾಲೇಜು, ದೋಟಿಹಾಳದಲ್ಲಿ ನಡೆದ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಕುಷ್ಟಗಿಯ ಬಾಲಕಿಯರ ಸರ್ಕಾರಿ ಪಿಯು ಕಾಲೇಜಿನ ವಿದ್ಯಾರ್ಥಿನಿಯರು ಉತ್ಸಾಹದಿಂದ ಭಾಗವಹಿಸಿ, ಹಲವು ಕ್ರೀಡಾ ವಿಭಾಗಗಳಲ್ಲಿ ಪ್ರಶಸ್ತಿ ಹಾಗೂ ಸ್ಥಾನಗಳನ್ನು ಪಡೆದುಕೊಂಡಿದ್ದಾರೆ. ಕ್ರೀಡಾಕೂಟದಲ್ಲಿ ವಾಲಿಬಾಲ್ ಹಾಗೂ ಥ್ರೋಬಾಲ್ ತಂಡಗಳು ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದು, ಕಬಡ್ಡಿ ಹಾಗೂ 100 ಮೀಟರ್ ರಿಲೇ ತಂಡಗಳು ದ್ವಿತೀಯ ಸ್ಥಾನ ಪಡೆದು ಗಮನ ಸೆಳೆದಿವೆ. ತಂಡಗಳ ಸಂಘಟಿತ ಆಟ ಹಾಗೂ ವಿದ್ಯಾರ್ಥಿನಿಯರ ಕ್ರೀಡಾ ಕೌಶಲ್ಯಕ್ಕೆ ಕ್ರೀಡಾಭಿಮಾನಿಗಳಿಂದ ಮೆಚ್ಚುಗೆ ವ್ಯಕ್ತವಾಗಿದೆ.

ವೈಯಕ್ತಿಕ ವಿಭಾಗದಲ್ಲೂ ಮಿಂಚಿದ ವಿದ್ಯಾರ್ಥಿನಿಯರು ವೈಯಕ್ತಿಕ ಕ್ರೀಡಾ ವಿಭಾಗಗಳಲ್ಲಿಯೂ ಕಾಲೇಜಿನ ವಿದ್ಯಾರ್ಥಿನಿಯರು ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ. ಭಾಗ್ಯಲಕ್ಷ್ಮಿ ಶಾಟ್‌ಪುಟ್‌ನಲ್ಲಿ ದ್ವಿತೀಯ ಸ್ಥಾನ ಪಡೆದುಕೊಂಡರೆ, ಮಂಜುಳಾ ಜವಳಿ 1500 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ.



ಅನು ಅವರು ಜಾವೆಲಿನ್ ಥ್ರೋನಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಇದೇ ವೇಳೆ ಭಾಗ್ಯಲಕ್ಷ್ಮಿ ಮೇಟಿ ಅವರು ಹೈಜಂಪ್, ಲಾಂಗ್ ಜಂಪ್ ಹಾಗೂ 100 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದು ಅತ್ಯುತ್ತಮ ಸಾಧನೆ ಮಾಡಿದ್ದಾರೆ. ಮೂರು ವಿಭಾಗಗಳಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ಗಮನ ಸೆಳೆದಿರುವ ಭಾಗ್ಯಲಕ್ಷ್ಮಿ ಮೇಟಿ ಅವರು ಪ್ರತಿಷ್ಠಿತ 'ವೀರಾಗ್ರಣಿ' ಪ್ರಶಸ್ತಿಗೆ ಭಾಜನರಾಗಿದ್ದಾರೆ. ಇನ್ನು ಗಂಗಮ್ಮ ಕರಪಡಿ 3000 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ, ಯಾಸ್ಮೀನ್ ಡಿಸ್ಕಸ್ ಥ್ರೋನಲ್ಲಿ ದ್ವಿತೀಯ ಸ್ಥಾನ ಹಾಗೂ ಲೇಖನಾ ಚೆಸ್‌ನಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಅದೇ ರೀತಿ ಐಶ್ವರ್ಯ ಜಾವೆಲಿನ್ ಥ್ರೋನಲ್ಲಿ ತೃತೀಯ ಸ್ಥಾನ ಹಾಗೂ ಸುಶ್ಮಿತಾ 800 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಪಡೆದು ತಮ್ಮ ಪ್ರತಿಭೆಯನ್ನು ಮೆರೆದಿದ್ದಾರೆ. ಜಿಲ್ಲಾ ಮಟ್ಟದಲ್ಲೂ ಉತ್ತಮ ಪ್ರದರ್ಶನದ ನಿರೀಕ್ಷೆ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿನಿಯರು ತೋರಿದ ಸಾಧನೆ ಕಾಲೇಜಿನ ಕ್ರೀಡಾ ಚಟುವಟಿಕೆಗಳಿಗೆ ಹೊಸ ಉತ್ಸಾಹವನ್ನು ನೀಡಿದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರಲ್ಲಿರುವ ಕ್ರೀಡಾ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ತರಬೇತಿ ಹಾಗೂ ಪ್ರೋತ್ಸಾಹ ನೀಡಿದರೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡಲು ಸಾಧ್ಯ ಎಂಬುದನ್ನು ಈ ಕ್ರೀಡಾಕೂಟದ ಫಲಿತಾಂಶ ಮತ್ತೊಮ್ಮೆ ತೋರಿಸಿಕೊಟ್ಟಿದೆ.

ವಿದ್ಯಾರ್ಥಿನಿಯರ ಸಾಧನೆಗೆ ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕ ವೃಂದ ಅಭಿನಂದನೆ ಸಲ್ಲಿಸಿದ್ದಾರೆ. ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿನಿಯರು ಮುಂದಿನ ಹಂತದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಕಾಲೇಜಿಗೆ ಹಾಗೂ ಕುಷ್ಟಗಿ ತಾಲ್ಲೂಕಿಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

ಕ್ರೀಡಾ ಕಾರ್ಯದರ್ಶಿ ದಾದಾಪೀರ್ ಅಭಿನಂದನೆ ಕಾಲೇಜಿನ ಕ್ರೀಡಾ ಕಾರ್ಯದರ್ಶಿ ದಾದಾಪೀರ್ ಅವರು ಮಾತನಾಡಿ, ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿನಿಯರು ತೋರಿದ ಸಾಧನೆ ಸಂತಸ ತಂದಿದೆ. ವಿದ್ಯಾರ್ಥಿನಿಯರ ಪರಿಶ್ರಮ, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವದಿಂದಾಗಿ ಹಲವು ವಿಭಾಗಗಳಲ್ಲಿ ಉತ್ತಮ ಫಲಿತಾಂಶ ದೊರೆತಿದೆ. ವಾಲಿಬಾಲ್, ಥ್ರೋಬಾಲ್ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿನಿಯರು ಮುಂದಿನ ಹಂತದಲ್ಲಿಯೂ ತಮ್ಮ ಅದ್ಭುತ ಪ್ರದರ್ಶನವನ್ನು ಮುಂದುವರಿಸಿ ಮತ್ತಷ್ಟು ಪ್ರಶಸ್ತಿಗಳನ್ನು ಗೆಲ್ಲುವ ವಿಶ್ವಾಸವಿದೆ ಎಂದು ಹೇಳಿದರು.

ವಿದ್ಯಾರ್ಥಿನಿಯರ ಈ ಸಾಧನೆಯು ಇತರೆ ವಿದ್ಯಾರ್ಥಿಗಳಿಗೂ ಕ್ರೀಡೆಯಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆಯಾಗಿದ್ದು, "ಕ್ರೀಡೆಯಲ್ಲಿ ಸಾಧನೆ ವಿದ್ಯಾರ್ಥಿನಿಯರ ಆತ್ಮವಿಶ್ವಾಸಕ್ಕೆ ಹೊಸ ಚೈತನ್ಯ" ಎಂಬ ಸಂದೇಶವನ್ನು ಸಾರಿದೆ. ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿನಿಯರಿಗೆ ಶುಭಾಶಯಗಳ ಮಹಾಪೂರ ಹರಿದುಬಂದಿದ್ದು, ಮುಂದಿನ ಸ್ಪರ್ಧೆಗಳಲ್ಲಿ ಮತ್ತಷ್ಟು ಪದಕಗಳನ್ನು ಗೆದ್ದು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಲಿ ಎಂಬುದು ಕ್ರೀಡಾಭಿಮಾನಿಗಳ ಆಶಯವಾಗಿದೆ.

## ಅಯೋಧ್ಯೆ ರಾಂಮಂದಿರದ ಸಿಇಒ ಆಗಿ ವಾಯುಪಡೆಯ ನಿವೃತ್ತ ಅಧಿಕಾರಿ ಏರ್ ಮಾರ್ಷಲ್ ಜಿತೇಂದ್ರ ಮಿಶ್ರಾ ನೇಮಕ

❏ ನೈಜ್ಯ ದೆಸೆ ನ್ಯೂಸ್

**ಅಯೋಧ್ಯೆ: ಆಪರೇಷನ್ ಸಿಂಧೂರ್ ಸಂದರ್ಭದಲ್ಲಿ ಪಶ್ಚಿಮ ವಾಯು ಕಮಾಂಡ್‌ನ ನೇತೃತ್ವ ವಹಿಸಿದ್ದ ಭಾರತೀಯ ವಾಯುಪಡೆಯ ನಿವೃತ್ತ ಅಧಿಕಾರಿ ಏರ್ ಮಾರ್ಷಲ್ ಜಿತೇಂದ್ರ ಮಿಶ್ರಾ ಅವರನ್ನು ಬುಧವಾರ ರಾಮ ಮಂದಿರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ.**



ಭಾರತೀಯ ವಾಯುಪಡೆಯ ನಿವೃತ್ತ ಅಧಿಕಾರಿಯಾಗಿರುವ ಮಿಶ್ರಾ, ಈ ಹಿಂದೆ ಪಶ್ಚಿಮ ವಾಯು ಕಮಾಂಡ್‌ನ 'ಏರ್ ಆಫೀಸರ್ ಕಮಾಂಡಿಂಗ್–ಇನ್–ಚೀಫ್' (AOC-in-C) ಆಗಿ ಸೇವೆ ಸಲ್ಲಿಸಿದ್ದರು. ಅವರು ರಾಮ ಮಂದಿರದ ಮೊದಲ ಖಾಯಂ ಸಿಇಒ ಆಗಿದ್ದಾರೆ. ಏರ್ ಮಾರ್ಷಲ್ ಜಿತೇಂದ್ರ ಮಿಶ್ರಾ ಅವರು ನಿವೃತ್ತಿಯ ವಯಸ್ಸನ್ನು ತಲುಪಿದ ನಂತರ, ಏಪ್ರಿಲ್ 30, 2026 ರಂದು ಭಾರತೀಯ ವಾಯುಪಡೆಯಿಂದ ನಿವೃತ್ತರಾದರು. ಸೇವಾ ವಿವರಗಳ ಪ್ರಕಾರ, ಮಿಶ್ರಾ ಅವರು 'ಫೈಟರ್' (ಯುದ್ಧ ವಿಮಾನ) ವಿಭಾಗಕ್ಕೆ ಸೇರಿದವರಾಗಿದ್ದರು ಮತ್ತು 18575 ಈ(ಕ) ಎಂಬ ಸೇವಾ ಸಂಖ್ಯೆಯಡಿ ಸೇವೆ ಸಲ್ಲಿಸಿದರು. ಅವರು ಡಿಸೆಂಬರ್ 6, 1986 ರಂದು 138ನೇ ಕೋರ್ಸ್‌ನ ಭಾಗವಾಗಿ ಭಾರತೀಯ ವಾಯುಪಡೆಗೆ ನಿಯೋಜನೆಗೊಂಡರು. ಅವರ ಸೇವಾ ಅವಧಿಯಲ್ಲಿ, ಅವರು ವಿವಿಧ ಶ್ರೇಣಿಗಳಲ್ಲಿ ಬಡ್ತಿ ಪಡೆದು ಏರ್ ಮಾರ್ಷಲ್ ಹುದ್ದೆಯನ್ನು ಅಲಂಕರಿಸಿದರು ಮತ್ತು ತರುವಾಯ ಕಮಾಂಡರ್–ಇನ್–ಚೀಫ್ ಆಗಿ ಅಧಿಕಾರ ವಹಿಸಿಕೊಂಡರು.

# ರೈತರ ಹಿತಕ್ಕಾಗಿ ಶಾಸಕ ಹಂಪನಗೌಡ ಬಾದರ್ಲಿ ಅವರ ಮಹತ್ವದ ಹೆಜ್ಜೆ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರು ತಾಲ್ಲೂಕಿನ ರೈತರಿಗೆ ರಸಗೊಬ್ಬರ ಸೇರಿದಂತೆ ಕೃಷಿ ಉತ್ಪನ್ನಗಳ ಸಾಗಾಟ ಹಾಗೂ ಸರಬರಾಜು ಸುಗಮವಾಗುವ ನಿಟ್ಟಿನಲ್ಲಿ ನೂತನ ರೈಲ್ವೆ ನಿಲ್ದಾಣದಲ್ಲಿ ಗುಡ್ಸ್ ಪಾಯಿಂಟ್ ನಿರ್ಮಾಣ ಮಾಡುವ ಕುರಿತು ಶಾಸಕ ಹಂಪನಗೌಡ ಬಾದರ್ಲಿ ಅವರು ಸ್ಥಳ ಪರಿಶೀಲನೆ ನಡೆಸಿದರು.**

ನೂತನ ರೈಲ್ವೆ ನಿಲ್ದಾಣದಲ್ಲಿ ಗುಡ್ಸ್ ಪಾಯಿಂಟ್ ನಿರ್ಮಾಣವಾದರೆ ಸಿಂಧನೂರು ತಾಲ್ಲೂಕಿನ ಸಾವಿರಾರು ರೈತರಿಗೆ ಹೆಚ್ಚಿನ ಅನುಕೂಲವಾಗಲಿದ್ದು, ಹೊರ ಜಿಲ್ಲೆ ಹಾಗೂ ವಿವಿಧ ರಾಜ್ಯಗಳಿಂದ ರೈಲಿನ ಮೂಲಕ ರಸಗೊಬ್ಬರಗಳನ್ನು ಕಡಿಮೆ ವೆಚ್ಚದಲ್ಲಿ ತರಿಸಿಕೊಳ್ಳಲು ಸಾಧ್ಯವಾಗಲಿದೆ. ಇದರಿಂದ ರೈತರಿಗೆ ರಸಗೊಬ್ಬರಗಳ ಸಾಗಾಟ ವೆಚ್ಚ ಕಡಿಮೆಯಾಗುವುದರ ಜೊತೆಗೆ ಸಮಯದ ಉಳಿತಾಯವೂ ಆಗಲಿದೆ.

ಈ ಹಿನ್ನೆಲೆಯಲ್ಲಿ ಗುರುವಾರ ನೂತನ



ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿದ ಶಾಸಕ ಹಂಪನಗೌಡ ಬಾದರ್ಲಿ ಅವರು, ಗುಡ್ಸ್ ಪಾಯಿಂಟ್ ನಿರ್ಮಾಣಕ್ಕೆ ಸೂಕ್ತ ಸ್ಥಳ, ರೈಲು ಸಂಪರ್ಕ ವ್ಯವಸ್ಥೆ ಹಾಗೂ ಅಗತ್ಯ ಮೂಲಸೌಕರ್ಯಗಳ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಸಮಗ್ರವಾಗಿ ಚರ್ಚಿಸಿದರು. ಗುಡ್ಸ್ ಪಾಯಿಂಟ್‌ಗೆ ಸರಕು ಸಾಗಣೆ ವಾಹನಗಳು ಸುಗಮವಾಗಿ ಸಂಚರಿಸಲು ಅಗತ್ಯವಿರುವ ರಸ್ತೆ ನಿರ್ಮಾಣದ ಬಗ್ಗೆಯೂ ಅಧಿಕಾರಿಗಳೊಂದಿಗೆ ಮಾಹಿತಿ ಪಡೆದು ಸ್ಥಳ ಪರಿಶೀಲನೆ ನಡೆಸಿದರು. ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆ ಕುರಿತು ಸಹ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಯಿತು. ರೈಲ್ವೆ ನಿಲ್ದಾಣದಿಂದ ಗುಡ್ಸ್ ಪಾಯಿಂಟ್‌ಗೆ ಸಂಪರ್ಕ ಕಲ್ಪಿಸುವ ರಸ್ತೆ, ವಾಹನಗಳ ಸಂಚಾರ, ಸರಕುಗಳ ಲೋಡಿಂಗ್ ಮತ್ತು ಅನ್‌ಲೋಡಿಂಗ್ ವ್ಯವಸ್ಥೆ ಸೇರಿದಂತೆ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳ ಕುರಿತು ಸ್ಥಳದಲ್ಲಿಯೇ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಲಾಯಿತು.

ಸಿಂಧನೂರು ತಾಲ್ಲೂಕು ಕೃಷಿ ಪ್ರಧಾನ ಪ್ರದೇಶವಾಗಿದ್ದು, ಪ್ರತಿವರ್ಷ ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರಗಳ ಅಗತ್ಯವಿರುತ್ತದೆ. ಪ್ರಸ್ತುತ ರಸಗೊಬ್ಬರಗಳನ್ನು ವಿವಿಧ ಮಾರ್ಗಗಳ ಮೂಲಕ ಸಾಗಾಟ ಮಾಡುವ ಸಂದರ್ಭದಲ್ಲಿ ರೈತರು ಹಾಗೂ ಗೊಬ್ಬರ ಪೂರೈಕೆದಾರರಿಗೆ ಹೆಚ್ಚಿನ ಸಾರಿಗೆ ವೆಚ್ಚ ಮತ್ತು ಸಮಯದ ಸಮಸ್ಯೆ ಎದುರಾಗುತ್ತಿದೆ. ನೂತನ ರೈಲ್ವೆ ನಿಲ್ದಾಣದಲ್ಲಿ ಗುಡ್ಸ್ ಪಾಯಿಂಟ್ ನಿರ್ಮಾಣವಾದಲ್ಲಿ ಈ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ ಎಂಬ ಅಭಿಪ್ರಾಯವನ್ನು ಶಾಸಕ ಹಂಪನಗೌಡ ಬಾದರ್ಲಿ ಅವರು ವ್ಯಕ್ತಪಡಿಸಿದರು.

ರೈತರ ಹಿತವೇ ಮುಖ್ಯ: ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ರಸಗೊಬ್ಬರಗಳು ಸಮಯಕ್ಕೆ ಸರಿಯಾಗಿ ಹಾಗೂ ಕಡಿಮೆ ವೆಚ್ಚದಲ್ಲಿ ಲಭ್ಯವಾಗಬೇಕು.

# 3.7 ಟನ್ ಅವಧಿ ಮುಗಿದ ಶಿಶು ಆಹಾರ ವಶಪಡಿಸಿಕೊಂಡ FSSAI

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಅವಧಿ ಮುಗಿದ ಹಾಗೂ ಅವುಗಳಿಗೆ ತಪ್ಪು ಲೇಬಲ್ ಅಂಟಿಸಿದ್ದ ಸುಮಾರು 3.7 ಶಿಶುಗಳಿಗೆ ತಿನ್ನಿಸುವ ಆಹಾರವನ್ನು FSSAI ವಶಪಡಿಸಿಕೊಂಡಿದೆ.**

ಶಿಶು ಆಹಾರದ ಸುರಕ್ಷತೆ ಮತ್ತು ನಿಯಮಗಳ ಅನುಸರಣೆಗೆ ಸಂಬಂಧಿಸಿದ ಪರಿಶೀಲನೆಗಳ ನಂತರ, ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು (FSSAI) ಬೆಂಗಳೂರು ಮೂಲದ ನ್ಯೂಟ್ರಾಸ್ಯುಟಿಕಲ್ ಮತ್ತು ಆರೋಗ್ಯ ರಕ್ಷಣಾ ಕಂಪನಿಯಾದ 'ಬ್ರಿಟಿಷ್ ಲೈಫ್‌ಸೈನ್ಸಸ್ ಪ್ರೈವೇಟ್ ಲಿಮಿಟೆಡ್' ವಿರುದ್ಧ



ಕಠಿಣ ದಂಡನಾತ್ಮಕ ಕ್ರಮಗಳನ್ನು ಕೈಗೊಂಡಿದೆ.

"ಈಖಖ ಕಾಯಿದೆ, 2006ರ ಅಡಿಯಲ್ಲಿ ತಪ್ಪು ಲೇಬಲ್ ಹೊಂದಿದ್ದ ಗಣನೀಯ ಪ್ರಮಾಣದ ಶಿಶು ಆಹಾರವನ್ನು ವಶಪಡಿಸಿಕೊಳ್ಳಲಾಗಿದೆ. ಆಹಾರ ವ್ಯವಹಾರ ನಿರ್ವಾಹಕರ (FBO) ವಿರುದ್ಧ ಕಾನೂನು ಕ್ರಮವನ್ನು ಪ್ರಾರಂಭಿಸಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯಿದೆ, 2006ರ ಅಡಿಯಲ್ಲಿ ತಪ್ಪು ಲೇಬಲ್ ಹೊಂದಿದ್ದ ಗಣನೀಯ ಪ್ರಮಾಣದ ಶಿಶು ಆಹಾರವನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಆಹಾರ ವ್ಯವಹಾರ ನಿರ್ವಾಹಕರ (FBO) ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಸುದ್ದಿ ಸಂಸ್ಥೆ ANI ವರದಿ ಮಾಡಿದೆ.

ನಿಯಮ ಉಲ್ಲಂಘನೆಯ ಗಂಭೀರತೆ ಮತ್ತು ನಿಯಮಗಳಿಗೆ ಅನುಗುಣವಾಗಿಲ್ಲದ ಶಿಶು ಆಹಾರ ಉತ್ಪನ್ನಗಳಿಂದ ಉಂಟಾಗಬಹುದಾದ ಅಪಾಯಗಳನ್ನು ಪರಿಗಣಿಸಿ, ಅವಧಿ ಮುಗಿದಿದ್ದ 3.7 ಮೆಟ್ರಿಕ್ ಟನ್ ಶಿಶು ಆಹಾರ ಪದಾರ್ಥಗಳನ್ನು ನಾಶಪಡಿಸಲು ನ್ಯಾಯಾಲಯ ಆದೇಶಿಸಿತು. ಅವಧಿ ಮುಗಿದಿದ್ದ ಈ ಸರಕನ್ನು ಮರುಬಳಕೆ ಮಾಡುವುದನ್ನು ಅಥವಾ ಆಹಾರ ಸರಪಳಿಗೆ ಮರುಸೇರ್ಪಡೆಯಾಗುವುದನ್ನು ತಡೆಯಲು ಅದನ್ನು ಸುರಕ್ಷಿತವಾಗಿ ವಿಲೇವಾರಿ ಮಾಡಲಾಯಿತು.

ಈ ಜಾರಿ ಕ್ರಮವು ಶಿಶುಗಳು ಮತ್ತು ಚಿಕ್ಕ ಮಕ್ಕಳ ಆರೋಗ್ಯ ಹಾಗೂ ಸುರಕ್ಷತೆಯನ್ನು ರಕ್ಷಿಸುವ ತನ್ನ ಬದ್ಧತೆಯನ್ನು ಬಲಪಡಿಸುತ್ತದೆ ಎಂದು FSSAI ತಿಳಿಸಿದೆ.

# ಚಾಮರಾಜನಗರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ 5 ತಾಲೂಕುಗಳು ತೀವ್ರ ಬರಪೀಡಿತ ;

## ಸಮಸ್ಯೆಯಾಗದಂತೆ ಪರಿಸ್ಥಿತಿ ನಿಭಾಯಿಸಿ ಮುಂದಿನ ಮುಂಗಾರಿನವರೆಗೆ ಮೇವಿನ ಕೊರತೆಯಾಗದಂತೆ ತುರ್ತು ಯೋಜನೆ ಸಿದ್ಧಪಡಿಸಿ:

❏ ನೈಜ್ಯ ದೆಸೆ ನ್ಯೂಸ್

**ತಾಂಡವಾಪುರ ಸೆಪ್ಟೆಂಬರ್ 3ಚಾಮರಾಜನಗರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ 5 ತಾಲೂಕುಗಳು ತೀವ್ರ ಬರಪೀಡಿತ ; ಸಮಸ್ಯೆಯಾಗದಂತೆ ಪರಿಸ್ಥಿತಿ ನಿಭಾಯಿಸಿ ಮುಂದಿನ ಮುಂಗಾರಿನವರೆಗೆ ಮೇವಿನ ಕೊರತೆಯಾಗದಂತೆ ತುರ್ತು ಯೋಜನೆ ಸಿದ್ಧಪಡಿಸಿ: ಪ್ರಗತಿ ಪರಿಶೀಲನಾ ಸಭೆಯಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಆದ ಡಾ.ಜಿ.ಪರಮೇಶ್ವರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು**

ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಜಿಲ್ಲೆಯ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಹನೂರು ಪಟ್ಟಣದ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ??ಚಾಮರಾಜನಗರ ಜಿಲ್ಲೆಯ ಐದು ತಾಲ್ಲೂಕುಗಳು ತೀವ್ರ ಬರಪೀಡಿತ ಎಂದು ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಲಭ್ಯತೆ, ಜಾನುವಾರುಗಳಿಗೆ ಮೇವು ಲಭ್ಯತೆ, ಜನರಿಗೆ ಉದ್ಯೋಗ ನೀಡುವುದು ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಜನರಿಗೆ ಯಾವುದೇ ಸಮಸ್ಯೆಯಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ವಹಿಸಿ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಸರ್ಕಾರ ಬರ ನಿರ್ವಹಣೆಯ ಕುರಿತು



ಬಹಳ ಗಂಭೀರವಾಗಿದೆ. ಅಧಿಕಾರಿಗಳು ಬರವನ್ನು ಹಗುರವಾಗಿ ಪರಿಗಣಿಸಬಾರದು ಎಂದರು. ಜನರಿಗೆ ಮೂಲಭೂತ ಅವಶ್ಯಕತೆಗಳಾದ ಕುಡಿಯುವ ನೀರು, ಜೀವನೋಪಾಯಕ್ಕೆ ಅಗತ್ಯವಿರುವ ಉದ್ಯೋಗ, ಆರೋಗ್ಯ, ಜಾನುವಾರುಗಳಿಗೆ ಮೇವು, ನೀರು ಒದಗಿಸುವುದು ನಮ್ಮ ಮುಂದಿರುವ ಸವಾಲುಗಳು. ಇದನ್ನು ಕಂದಾಯ ಇಲಾಖೆಯು ಇತರೆ ಸಂಬಂಧಿತ ಇಲಾಖೆಗಳ ಜೊತೆ ಸೇರಿ ಜನ–ಜಾನುವಾರುಗಳಿಗೆ ಯಾವುದೇ ಸಮಸ್ಯೆಯಾಗದಂತೆ ಪರಿಸ್ಥಿತಿಯನ್ನು ನಿಭಾಯಿಸಬೇಕಾಗಿದೆ ಎಂದು ಹೇಳಿದರು.

ಚಾಮರಾಜನಗರದಲ್ಲಿ ಜುಲೈ 2026 ರಿಂದ ಈಚೆಗೆ ಕೇವಲ 0.81 ಲಕ್ಷ ಮಾನವ ದಿನಗಳಷ್ಟು ಉದ್ಯೋಗಗಳನ್ನು ಸೃಷ್ಟಿಸಲಾಗಿದೆ. ಆದರೆ ಕಳೆದ ವರ್ಷ ಇದೇ 2 ತಿಂಗಳುಗಳಲ್ಲಿ 2.50 ಲಕ್ಷ ಉದ್ಯೋಗಗಳನ್ನು ಸೃಜಿಸಲಾಗಿತ್ತು. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಶೇ.67 ರಷ್ಟು ಕಡಿಮೆಯಾಗಿದೆ. ಈ ವರ್ಷ ಯಾಕೆ ಇಷ್ಟು ಕಡಿಮೆಯಾಗಿದೆ. ಜನರು ಉದ್ಯೋಗ ಕೇಳುತ್ತಿಲ್ಲವೇ? ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಮತ್ತು ಅವರ ಅಧೀನ ಅಧಿಕಾರಿಗಳು ಏನು ಮಾಡುತ್ತಿದ್ದಾರೆ? ಎಂದು ಪ್ರಶ್ನಿಸಿದರು. ??ಚಾಮರಾಜನಗರದಲ್ಲಿ ಕೃಷಿ ಬೆಳೆ ವಿಮೆಯೂ ಕಡಿಮೆಯಾಗಿದೆ. ರಾಜ್ಯದಲ್ಲಿ 49.64 ಲಕ್ಷ ರೈತರ ಅರ್ಜಿಗಳಿಗೆ ಹಾಗೂ 33,17,167 ಹೆಕ್ಟೇರ್ ಭೂಮಿಗೆ ಬೆಳೆ ವಿಮೆ ಮಾಡಿಸಲಾಗಿದೆ. ಆದರೆ ಚಾಮರಾಜನಗರದಲ್ಲಿ ಕೇವಲ 18,436 ಜನ 9,984 ಹೆಕ್ಟೇರ್ ಪ್ರದೇಶಕ್ಕೆ ಮಾತ್ರ ನೋಂದಾಯಿಸಿಕೊಂಡಿರುತ್ತಾರೆ. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ಗಮನವಹಿಸಬೇಕು. ರೈತರಿಗೆ ಉತ್ತೇಜನ ನೀಡುವ ಕೆಲಸಗಳನ್ನು ಯಾಕೆ ಮಾಡಲಿಲ್ಲ. ಈ ರೀತಿ ಆಗಬಾರದು ಎಂದು ಎಚ್ಚರಿಸಿದರು.

ಚಾಮರಾಜನಗರದಲ್ಲಿ ವಾಡಿಕೆ ಮಳೆ 193 ಮಿ.ಮೀ ಆಗಬೇಕಿತ್ತು, ಆದರೆ ಸುರಿದಿರುವುದು ಕೇವಲ 87 ಮಿ.ಮೀ ಮಳೆ. ಇಲ್ಲೂ ಕೂಡ ಶೇ. 55 ರಷ್ಟು ಮಳೆ ಕೊರತೆಯಾಗಿದ್ದು, ಜಿಲ್ಲೆ ಡಿಫೀಷಿಯಟ್ ವರ್ಗದಲ್ಲಿದೆ. ವಿಶೇಷವಾಗಿ ಆಗಸ್ಟ್ ತಿಂಗಳಿನಲ್ಲಿ ಶೇ. 76 ರಷ್ಟು ಭಾರಿ ಮಳೆ ಕೊರತೆ ಉಂಟಾಗಿದೆ. ಜೂನ್ 1 ರಿಂದ ಆಗಸ್ಟ್ 31 ರವರೆಗಿನ ಮುಂಗಾರು ಮಳೆಯ ಅಂಕಿ–ಅಂಶಗಳನ್ನು ಗಮನಿಸಿದರೆ, ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದಲ್ಲಿ ಅತಿ ಹೆಚ್ಚು ಅಂದರೆ ಶೇ. 67 ರಷ್ಟು ಮಳೆ ಕೊರತೆಯಾಗಿದೆ ಹಾಗೂ ಯಳಂದೂರಿನಲ್ಲಿ ಶೇ. 65 ರಷ್ಟು ಮಳೆ ಕೊರತೆಯಾಗಿದೆ. ಚಾಮರಾಜನಗರ ಜಿಲ್ಲೆಯ ಎಲ್ಲಾ 5 ತಾಲೂಕುಗಳನ್ನು (ಚಾಮರಾಜನಗರ, ಗುಂಡ್ಲುಪೇಟೆ, ಕೊಳ್ಳೇಗಾಲ, ಹನೂರು, ಯಳಂದೂರು) 'ತೀವ್ರ' (Severe) ಬರಪೀಡಿತ ಎಂದು ಸರ್ಕಾರ ಈಗಾಗಲೇ ಘೋಷಿಸಿದೆ ಎಂದರು.

ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಇಲ್ಲಿ 48 ಗ್ರಾಮಗಳಿಗೆ 48 ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದ್ದು, 11 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲಾಗಿದೆ ಹಾಗೂ 11 ಗ್ರಾಮಗಳಿಗೆ ನೀರು ಪೂರೈಸಲಾಗುತ್ತಿದೆ. ಎಂದು ತಿಳಿಸಿದರು. ??ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 2,22,566 ಟನ್ ಮೇವು ಲಭ್ಯವಿದ್ದು, ಇದು ಸರಿಸುಮಾರು 23 ವಾರಗಳಿಗೆ ಸಾಕಾಗುತ್ತದೆ. ಆದರೆ, ಗುಂಡ್ಲುಪೇಟೆ ತಾಲೂಕಿನಲ್ಲಿ ಕೇವಲ 17 ವಾರಗಳಿಗೆ ಮಾತ್ರ ಮೇವು ಲಭ್ಯವಿದ್ದು, ಮುಂದಿನ ಮುಂಗಾರಿನವರೆಗೆ ಮೇವಿನ ಕೊರತೆಯಾಗದಂತೆ ತುರ್ತು ಯೋಜನೆಯನ್ನು ಸಿದ್ಧಪಡಿಸಬೇಕಿದೆ ಎಂದು ಸೂಚಿಸಿದರು. ??ಗುಂಡ್ಲುಪೇಟೆಯಲ್ಲಿ ಕೇವಲ 17 ವಾರಗಳಿಗೆ ಮಾತ್ರ ಮೇವು ಲಭ್ಯವಿರುವುದರಿಂದ, ಅಲ್ಲಿ ತಕ್ಷಣವೇ ಮೇವು ಬ್ಯಾಂಕ್ ಸ್ಥಾಪನೆಗೆ ಮತ್ತು ಮುಂದಿನ ಮುಂಗಾರಿನವರೆಗೆ ಮೇವು ಒದಗಿಸಲು ತುರ್ತು ಯೋಜನೆ ಮಾಡಿಕೊಳ್ಳಬೇಕಾಗಿದೆ.

ಮೇವಿನ ಕಿಟ್‌ಗಳನ್ನು ವಿತರಿಸಲು ಪಶುಸಂಗೋಪನಾ ಇಲಾಖೆಗೆ ಸರ್ಕಾರ ಈಗಾಗಲೇ 25 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ ಎಂದರು. ??ಸಭೆಯಲ್ಲಿ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಪುಟ್ಟರಂಗ ಶೆಟ್ಟಿ ಶಾಸಕರಾದ ಎಂ.ಆರ್. ಮಂಜುನಾಥ್, ಎ.ಆರ್.ಕ ಕೃಷ್ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್, ಕಾಡಾ ಅಧ್ಯಕ್ಷರಾದ ಪಿ.ಮರಿಸ್ವಾಮಿ ಜಿಲ್ಲಾಧಿಕಾರಿ ಶ್ರೀರೂಪ, ಜಿ.ಪಂ. ಸಿಇಒ. ಮೋನಾರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಮುತ್ತುರಾಜು ಮುಂತಾದವರು ಹಾಜರಿದ್ದರು

## ನೇಮಕಾತಿ ಪ್ರಕಟಣೆ

**KEA ನೇಮಕಾತಿ 2026–4699 ತಾಂತ್ರಿಕ ಮತ್ತು ತಾಂತ್ರಿಕೇತರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸೆಪ್ಟೆಂಬರ್ 1, 2026**

**KEA ನೇಮಕಾತಿ 2026: 4699 ತಾಂತ್ರಿಕ ಮತ್ತು ತಾಂತ್ರಿಕೇತರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (KEA) ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ತಾಂತ್ರಿಕ ಮತ್ತು ತಾಂತ್ರಿಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಅರ್ಜಿ ಪ್ರಕ್ರಿಯೆ ಪ್ರಾರಂಭವಾದ ನಂತರ ಆಸಕ್ತ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ಅಧಿಸೂಚನೆ ಬಿಡುಗಡೆಯಾದ ನಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನವೀಕರಿಸಲಾಗುತ್ತದೆ. ಅಧಿಕೃತ ವೆಬ್‌ಸೈಟ್: cetonline.karnataka.gov.in**

## ಹತ್ತಿಗೆ ಉತ್ತಮ ಬೆಲೆ ರೈತರಲ್ಲಿ ಮಂದಹಾಸ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ತಾಲ್ಲೂಕಿನ ಮಾರುಕಟ್ಟೆಗಳಲ್ಲಿ ಹತ್ತಿಗೆ ಉತ್ತಮ ಬೇಡಿಕೆ ಕಂಡುಬಂದಿದ್ದು, ಪ್ರತಿ ಕ್ವಿಂಟಲ್‌ಗೆ ?6,600ರಿಂದ ?9,200ರವರೆಗೆ ಬೆಲೆ ದೊರೆಯುತ್ತಿದೆ. ಇದ–ರಿಂದ ಹತ್ತಿ ಬೆಳೆದ ರೈತರಲ್ಲಿ ಮಂದಹಾಸ ಮೂಡಿದೆ.



ಕೊಪ್ಪಳ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧೆಡೆ ಹತ್ತಿಗೆ ಉತ್ತಮ ದರ ಸಿಗುತ್ತಿದ್ದು, ಪ್ರಸಕ್ತ ವರ್ಷ ಹತ್ತಿ ಬಿತ್ತನೆ ಪ್ರಮಾಣವೂ ಹೆಚ್ಚಾಗಿದೆ. ಮಳೆ ಕೊರತೆಯಿಂದ ಹಲವು ಬೆಳೆಗಳು ಹಾನಿಗೊಳಗಾಗಿರುವುದು ಹಾಗೂ ಮಾರುಕಟ್ಟೆಯಲ್ಲಿ ಹತ್ತಿಗೆ ಬೇಡಿಕೆ ಹೆಚ್ಚಿರುವುದು ದರ ಏರಿಕೆಗೆ ಕಾರಣವಾಗಿದೆ. ಸೆ.2ರಂದು ಕುಷ್ಟಗಿ ಎಪಿಎಂಸಿಯಲ್ಲಿ ಹತ್ತಿಗೆ ?9,200 ದರ ದಾಖಲಾಗಿದೆ. ರೈತರು ತಾವು ಬೆಳೆದ ಹತ್ತಿಯನ್ನು ಗುಣಮಟ್ಟ ಕಾಪಾಡಿಕೊಂಡು ಸೂಕ್ತ ಸಮಯದಲ್ಲಿ ಮಾರುಕಟ್ಟೆಗೆ ತಂದರೆ ಉತ್ತಮ ಬೆಲೆ ಪಡೆಯಬಹುದು. ಹಲವು ವರ್ಷಗಳ ಬಳಿಕ ಹತ್ತಿಗೆ ಇಷ್ಟೊಂದು ದರ ದೊರೆಯುತ್ತಿರುವುದು ರೈತರು ಹಾಗೂ ಹತ್ತಿ ಖರೀದಿಸುವ ವ್ಯಾಪಾರಿಗಳಿಗೂ ಸಂತಸದ ಸಂಗತಿಯಾಗಿದೆ ಎಂದು ದಲ್ಲಾಳಿ ವರ್ತಕ ಮಹಾಂತಯ್ಯ ಅರಳಲಿಮಠ ಹೇಳಿದರು. ರಾಸಾಯನಿಕ ಔಷಧ ಸೇರಿದಂತೆ ಕೃಷಿ ಪರಿಕರಗಳ ಬೆಲೆಗಳು ಗಗನಕ್ಕೇರುತ್ತಿರುವ ಸಂದರ್ಭದಲ್ಲಿ ಹತ್ತಿಗೆ ಉತ್ತಮ ಬೆಲೆ ಸಿಗುತ್ತಿರುವುದು ರೈತರಿಗೆ ನೆಮ್ಮದಿ ತಂದಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ದರ ದೊರೆತರೆ ರೈತರಿಗೆ ನೆಮ್ಮದಿಯ ಜತೆಗೆ ಉತ್ತಮ ಲಾಭವೂ ಸಿಗಲಿದೆ ಎಂದು ಕೆ. ಬೋದೂರತಾಂಡಾದ ರೈತ ಮುತ್ತಪ್ಪ ಚವ್ಹಾಣ ಹೇಳಿದರು.

## ಬಳ್ಳಾರಿ ಜೈಲಿನಲ್ಲಿ ಮೊಬೈಲ್ ಪತ್ತೆ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ನಗರದ ಕೇಂದ್ರ ಕಾರಾಗೃಹದಲ್ಲಿ ತಪಾಸಣೆ ವೇಳೆ ಮೊಬೈಲ್, ಇಯರ ಫೋನ್, 2 ಸಿಮ್ ಕಾರ್ಡ್ ಪತ್ತೆಯಾಗಿವೆ. ಜೈಲಿನ ಪ್ರಭಾರಿ ಅಧಿಕಾರಿ ಟಿ. ಬಿ. ಭಜಂತ್ರಿ ನೇತೃತ್ವದಲ್ಲಿ ತಪಾಸಣೆ ನಡೆಸಿದ ವೇಳೆ ಜೈಲಿನ 10ನೇ ಬ್ಯಾರಕ್ಸ ಕೊಠಡಿಗಳಲ್ಲಿ ಇವು ಪತ್ತೆಯಾಗಿವೆ. ಪ್ಲಾಸ್ಟಿಕ್ ಕವರ್‌ನಲ್ಲಿ ಬಚ್ಚಿಡಲಾಗಿತ್ತು.**



ಮಂಡ್ಯ ಮೂಲದ ಖೈದಿಗಳಾದ ಮಂಜು ಅಲಿಯಾಸ್ ಮಾಕಿ ಹಾಗೂ ಅಭಿಷೇಕ್ ಇವರು.ವಿಚಾರಣೆ ವೇಳೆ ಮೊಬೈಲ್ ಬಚ್ಚಿಟ್ಟು ಬಳಸುತ್ತಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರಂತೆ. ಈಕುರಿತು ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ಜೈಲಿನೊಳಗೆ ಮೊಬೈಲ್ ಹೇಗೆ ಬಂತು ಅನ್ನೋ ಬಗ್ಗೆ ತನಿಖೆ ನಡೆಸಲಿದ್ದಾರಂತೆ

## ಸೆ.19ರಂದು ರಾಷ್ಟ್ರೀಯ ಲೋಕ ಅದಾಲತ್: ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಅವಕಾಶ – ನ್ಯಾ. ಯಮನಪ್ಪ ಬಮ್ಮಣಗಿ

ನೈಜ್ಯ ದೆಸೆ ನ್ಯೂಸ್

**ಸುರಪುರ: ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಸೆ.19ರಂದು ನಗರದ ತಾಲೂಕು ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಬಹುಕಾಲದಿಂದ ಬಾಕಿ ಇರುವ ಪ್ರಕರಣಗಳು ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರಿಗೆ ಉತ್ತಮ ಅವಕಾಶ ಕಲ್ಪಿಸಲಾಗಿದೆ ಎಂದು ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಯಮನಪ್ಪ ಬಮ್ಮಣಗಿ ತಿಳಿಸಿದರು.**

ನಗರದ ತಾಲೂಕು ನ್ಯಾಯಾಲಯದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕ ಅದಾಲತ್‌ನಲ್ಲಿ ರಾಜಿ ಮಾಡಿಕೊಳ್ಳಬಹುದಾದ ಭೂ ವ್ಯಾಜ್ಯಗಳು, ಆಸ್ತಿ ವಿಭಜನೆ, ಅಡಮಾನ ಹಣ ಹಿಂತಿ–ರುಗಿಸುವಿಕೆ, ಕ್ರಯ ಒಪ್ಪಂದ, ಹಣ ವಸೂಲಾತಿ ದಾವೆಗಳು, ಚೆಕ್ ಬೌನ್ಸ್, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು ಸೇರಿದಂತೆ ವಿವಿಧ ಪ್ರಕರಣಗಳನ್ನು ಪರಸ್ಪರ ಒಪ್ಪಿಗೆಯ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು ಎಂದರು.

ಗಂಡ–ಹೆಂಡತಿ ನಡುವಿನ ಮನಸ್ತಾಪ, ಜೀವನಾಂಶ ಹಾಗೂ ದಾಂಪತ್ಯ ಪುನರ್‌ಸ್ಥಾಪನೆಗೆ ಸಂಬಂಧಿಸಿದ ಪ್ರಕರಣಗಳನ್ನೂ



ರಾಜಿ ಸಂಧಾನದ ಮೂಲಕ ಬಗೆಹ–ರಿಸಿಕೊಳ್ಳಲು ಅವಕಾಶವಿದೆ. ಸಾರ್ವಜನಿಕರು ಲೋಕ ಅದಾಲತ್‌ನ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರಾದ ಫಕೀರವ್ವ ಕೇಳಗೇರಿ ಮಾತನಾಡಿ, ವಾಹನ ಅಪಘಾತ ಪರಿಹಾರ ಪ್ರಕರಣಗಳು ಹಾಗೂ ವಿಮೆ ಇಲ್ಲದ ವಾಹನಗಳಿಂದ ಸಂಭವಿಸಿದ ಅಪಘಾತಗಳಿಗೆ ಸಂಬಂಧಿಸಿದಂತೆ ವಾಹನ ಮಾಲೀಕರು ಮತ್ತು ಸಂತ್ರಸ್ತರ ನಡುವೆ ಸೂಕ್ತ ಪರಿಹಾರ ಮೊತ್ತಕ್ಕೆ ರಾಜಿ ಸಂಧಾನ ಮಾಡಿಕೊಳ್ಳಬಹುದು ಎಂದು ತಿಳಿಸಿದರು. ಬಾಕಿ ಇರುವ ವಿದ್ಯುತ್ ಬಿಲ್ (ಜೆಸ್ಕಾಂ), ನೀರಿನ ಬಿಲ್, ನಗರಸಭೆ ಹಾಗೂ ತಾಲೂಕು ಪಂಚಾಯಿತಿ ತೆರಿಗೆ ಬಾಕಿ ಪ್ರಕರಣಗಳನ್ನೂ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ. ತಾಲೂಕು ಕಾನೂನು ಸೇವಾ ಸಮಿತಿಯ ಸಹಯೋಗದಲ್ಲಿ ಶಾಲಾ ಮಕ್ಕಳು ಹಾಗೂ ಸಾರ್ವಜನಿಕರಿಗೆ ಸಂಬಂಧಿಸಿದ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಪ್ರಕರಣಗಳು ಸೇರಿದಂತೆ ದಾವೆಪೂರ್ವ ಹಾಗೂ ರಾಜಿ ಮಾಡಿಕೊಳ್ಳಬಹುದಾದ ವಿವಿಧ ಪ್ರಕರಣಗಳನ್ನು ಕಾನೂನುಬದ್ಧವಾಗಿ ಇತ್ಯರ್ಥಪಡಿಸಿಕೊಳ್ಳಬಹುದು ಎಂದರು.

ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವುದರಿಂದ ಸಮಯ ಹಾಗೂ ಹಣ ಉಳಿತಾಯವಾಗುವುದರ ಜತೆಗೆ ನ್ಯಾಯಾಲಯಕ್ಕೆ ಪದೇಪದೇ ಅಲೆದಾಡುವ ಪರಿಸ್ಥಿತಿಯಿಂದಲೂ ಮುಕ್ತಿ ದೊರೆಯುತ್ತದೆ. ಅದಾಲತ್ ಮೂಲಕ ವ್ಯಾಜ್ಯ ಬಗೆಹರಿಸಿಕೊಂಡರೆ ನ್ಯಾಯಾಲಯದ ಶುಲ್ಕ ವಿಧಿಸಲಾಗುವುದಿಲ್ಲ. ಈಗಾಗಲೇ ಪಾವತಿಸಿರುವ ನ್ಯಾಯಾಲಯದ ಶುಲ್ಕವನ್ನೂ ಮರುಪಾವತಿಸಲಾಗುತ್ತದೆ. ಲೋಕ ಅದಾಲತ್‌ನಲ್ಲಿ ಪ್ರಕರಣ ಇತ್ಯಥ–’ರ್ಗೊಂಡ ಬಳಿಕ ಅದರ ವಿರುದ್ಧ ಮೇಲ್ಮನವಿ ಸಲ್ಲಿಸಲು ಅವಕಾಶ ಇರುವುದಿಲ್ಲ ಎಂದು ನ್ಯಾಯಾಧೀಶರು ವಿವರಿಸಿದರು.

ಹಿಂದಿನ ಲೋಕ ಅದಾಲತ್‌ನಲ್ಲಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸುವ ಮೂಲಕ ಯಾದಗಿರಿ ಜಿಲ್ಲೆಯಲ್ಲೇ ಸುರಪುರ ಎರಡನೇ ಸ್ಥಾನ ಪಡೆದಿತ್ತು. ಈ ಬಾರಿಯೂ ಹೆಚ್ಚಿನ ಸಂಖ್ಯೆಯ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಲೋಕ ಅದಾಲತ್ ಕುರಿತು ಗ್ರಾಮ ಪಂಚಾಯಿತಿ, ನಗರಸಭೆ ಹಾಗೂ ಪುರಸಭೆ ವ್ಯಾಪ್ತಿಯಲ್ಲಿ ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಲಾಗಿದೆ. ಸಾರ್ವಜನಿಕರು, ಕಕ್ಷಿದಾರರು ಹಾಗೂ ವಕೀಲರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಷ್ಟ್ರೀಯ ಲೋಕ ಅದಾಲತ್‌ನ ಸದುಪಯೋಗ ಪಡೆದುಕೊಳ್ಳಬೇಕು ಎಂದು ನ್ಯಾಯಾಧೀಶರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಜೆಎಂಎಫ್‌ಸಿ ನ್ಯಾಯಾಧೀಶರಾದ ಕೆ.ಎಂ. ಪಾಟೀಲ್, ನ್ಯಾಯಾಧೀಶ ಮುದಕಪ್ಪ ಸೇರಿದಂತೆ ನ್ಯಾಯಾಲಯದ ಸಿಬ್ಬಂದಿ ಉಪಸ್ಥಿತರಿದ್ದರು.

## ಪೌಷ್ಟಿಕಾಂಶಯುಕ್ತ ಆಹಾರ ಸೇವಿಸಿ ಆರೋಗ್ಯಕರ ಜೀವನ ನಡೆಸಿ"

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಹಾರಾಪುರ ಇವರ ಸಂಯುಕ್ತಾಶ್ರಯದಲ್ಲಿ ಬೂತಲದಿನ್ನಿ ಆಯುಷ್ಮಾನ್ ಆರೋಗ್ಯ ಕೇಂದ್ರದಲ್ಲಿ**

'ಗ್ರಾಮ ನೈರ್ಮಲ್ಯ ಸಮಿತಿ ಸಭೆ'ಯಲ್ಲಿ ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹವನ್ನು ಪ್ರತಿ ವರ್ಷ ಸೆಪ್ಟೆಂಬರ್ 1 ರಿಂದ 7 ರವರೆಗೆ ಆಚರಿಸಲಾಗುತ್ತದೆ ಎಂದು ತಾಯಂದಿರನ್ನು ಉದ್ದೇಶಿಸಿ ಗೀತಾ ಹಿರೇಮಠ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ತಿಳಿಸಿದರು. ಪೌಷ್ಟಿಕ ಆಹಾರದಲ್ಲಿದೆ ಆರೋಗ್ಯದ ಗುಟ್ಟು, ಸಮತೋಲಿತ ಆಹಾರ ಮತ್ತು ಆರೋಗ್ಯ ಮತ್ತು ಪೌಷ್ಟಿಕಾಂಶದ ಕೊರತೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ 1982 ರಿಂದ ಭಾರತದ ಕೇಂದ್ರ ಸರ್ಕಾರವು ಪೌಷ್ಟಿಕಾಂಶದ ಬಗ್ಗೆ ಜನರಿಗೆ ಅರಿವು ಮೂಡಿಸುವ ಶಿಕ್ಷಣ ನೀಡಲು ಆರೋಗ್ಯಕರ ಮತ್ತು ಸುಸ್ಥಿರ ಜೀವನಶೈಲಿಗೆ ಪ್ರೋತ್ಸಾಹಿಸಲು ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹ ಆಚ–




ರಿಸಲು ಆರಂಭಿಸಿತು. ಸಮತೋಲಿತ ಆಹಾರ ಏಳು ಅಂಶಗಳನ್ನು ಹೊಂದಿರಬೇಕು.

ಪಿಷ್ಟ ಪ್ರೋಟೀನ್, ಕೊಬ್ಬು, ನಾರಿನ ಅಂಶಗಳು, ಜೀವ ಸತ್ವಗಳು, ಖನಿಜಗಳು ಹಾಗೂ ನೀರಿನ ಅಂಶಗಳು ಇರಬೇಕು. ಮುಖ್ಯವಾಗಿ ಮಹಿಳೆಯರು ನಾರಿನ ಅಂಶ ಜೀವಸತ್ವ ಹಾಗೂ ಖನಿಜಾಂಶ ಯುಕ್ತ ಆಹಾರಗಳನ್ನು ತಪ್ಪಿಸಬಾರದು. ಪಾಲಿಶ್ ಮಾಡದ ಧಾನ್ಯಗಳು ಹಾಗೂ ಸಿರಿಧಾನ್ಯಗಳಲ್ಲಿ ನಾರಿನ ಅಂಶ ಅಧಿಕವಾಗಿರುತ್ತದೆ. ಸಿರಿಧಾನ್ಯಗಳ ಅಡುಗೆ, ರುಚಿಸದಿದ್ದರೆ ಅದನ್ನು ಸ್ವಲ್ಪ ಪ್ರಮಾಣದಲ್ಲಿ ರೂಡಿಸಿಕೊಂಡು ನಿತ್ಯದ ಆಹಾರ ಪದ್ಧತಿಯಲ್ಲಿ ಸೇರಿಸಿಕೊಳ್ಳುವುದು ಉತ್ತಮವೆಂದರು.

ವೃದ್ಧಾಪ್ಯದಲ್ಲಿ ಕಂಡುಬರುವ ಸಮಸ್ಯೆಗಳನ್ನು ತಡೆಗಟ್ಟಲು ಸಮತೋಲಿತ ಆಹಾರವು ಇರಬೇಕು ಆಗ ಮಾತ್ರ ಶರೀರದ ಬೆಳವಣಿಗೆ ಚಯಾಪಚಯ ಕ್ರಿಯೆಗಳು ಹಾಗೂ ಅಂಗಾಂಶಗಳ ಸಂರಕ್ಷಣೆಯಾಗುತ್ತದೆ. ನಿರ್ಲಕ್ಷಿಸಿದರೆ ವಿವಿಧ ಕಾಯಿಲೆಗಳು ಬರುವ ಸಾಧ್ಯತೆ ಅಧೀಕ.

ಊಟದ ತಟ್ಟೆಯಲ್ಲಿ ಯಾವಾಗಲೂ ಮೂರು ಬಣ್ಣದ ತರಕಾರಿಗಳು ಇರಬೇಕು. ಹಸಿರು ತರಕಾರಿಗಳು ಬೇಳೆಕಾಳುಗಳು ಹಾಲಿನ ಉತ್ಪನ್ನಗಳು, ಹಣ್ಣುಗಳು ಇರಬೇಕು. ಹಾಗೂ ಮಕ್ಕಳಿಗೆ ಪೌಷ್ಟಿಕ ಮತ್ತು ಸಮತೋಲಿತ ಆಹಾರವು ಅವರ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತಿ ಅವಶ್ಯಕವಾಗಿದೆ. ಮುಖ್ಯವಾಗಿ ಕಾರ್ಬೋಹೈಡ್ರೇಟ್ಸ್ ಪ್ರೊಟೀನ್ಸ್, ಕೊಬ್ಬು, ಜೀವ ಸತ್ವಗಳು ಮತ್ತು ಕನಿಜಾಂಶಗಳು, ದೈಹಿಕ ಬೆಳವಣಿಗೆ ಹಾಗೂ ಮೆದುಳಿನ ಚುರುಕುತನ, ರೋಗನಿರೋಧಕ ಶಕ್ತಿ ಹೆಚ್ಚಿಸಿ ರಕ್ತಹೀನತೆಯನ್ನು ಹೋಗಲಾಡಿಸಲು ಸಹಾಯಕವಾಗಿವೆ.

ಗರ್ಭಿಣಿ ಸ್ತ್ರೀಯರಲ್ಲಿ ಬಾಣಂತಿಯರಲ್ಲಿ ರಕ್ತಸ್ರಾವದಿಂದ ಅಪೌಷ್ಟಿಕತೆ ಹೆಚ್ಚಾಗಿ ಕಂಡುಬರುವ ಕಾರಣ ವೈದ್ಯರ ಸೂಚನೆಯಂತೆ ಕಬ್ಬಿಣಾಂಶದ ಮತ್ತು ಪೋಲಿಕ್ ಆಸಿಡ್ ಮಾತ್ರೆಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು. ಗರ್ಭಿಣಿಯ–ರಿಗಾಗಿ ಕರ್ನಾಟಕ ಸರ್ಕಾರವು ಅಪೌಷ್ಟಿಕತೆ ತಡೆಯಲು ಮಾತೃಪೂರ್ಣ ಯೋಜನೆ ಅಡಿಯಲ್ಲಿ ಅಂಗನವಾಡಿಗಳ ಮೂಲಕ ಪೌಷ್ಟಿಕಾಹಾರ ಮತ್ತು ಹಾಲನ್ನು ಉಚಿತವಾಗಿ ನೀಡುತ್ತಿದ್ದು ಸದುಪಯೋಗ ಪಡೆದುಕೊಳ್ಳಲು ವಿನಂತಿಸಿದರು.ಈ ಕಾರ್ಯಕ್ರಮದಲ್ಲಿ ದೀಪಿಕಾ ಅಲೂಔ, ಪ್ರೇಮಾ ಕಊಅಔ, ಯಂಕಮ್ಮ ಆಶಾ ಕಾರ್ಯಕರ್ತೆಯಾರು, ಶಶಿಕಲಾ, ಸುಮಿತ್ರ, ಅನ್ನಮ್ಮ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗರ್ಭಿಣಿ ತಾಯಂದಿರು ಉಪಸ್ಥಿತರಿದ್ದರು.

## ಮೊಮೀನ್ ಪುರ ಮುಖ್ಯ ರಸ್ತೆಯಲ್ಲಿ ಬಿಡಾಡಿ ದನಗಳ ಹಾವಳಿ: ವಾಹನ ಸವಾರರಲ್ಲಿ ಆತಂಕ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ನಗರದ ವಾರ್ಡ್ ನಂ.10ರ ಮೊಮೀನ್ ಪುರ ಮುಖ್ಯ ರಸ್ತೆಯ ಕಟ್ಟಗುರು ಕಟ್ಟೆಯಲ್ಲಿ ಬಿಡಾಡಿ ದನಕರುಗಳ ಹಾವಳಿ ಹೆಚ್ಚಾಗಿದ್ದು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.**

ಮುಖ್ಯ ರಸ್ತೆಯಲ್ಲೇ ದನಕರುಗಳು ಗುಂಪು ಗುಂಪಾಗಿ ಓಡಾಡುತ್ತಿರುವುದ–ರಿಂದ ವಾಹನ ಸವಾರರು ಎಚ್ಚ–ರಿಕೆಯಿಂದ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ರಸ್ತೆಯ ಮಧ್ಯದಲ್ಲೇ ದನಕರುಗಳು ನಿಂತುಕೊಳ್ಳುತ್ತಿರುವುದರಿಂದ ಸಂಚಾರಕ್ಕೂ ಅಡಚಣೆ ಉಂಟಾಗುತ್ತಿದೆ.



ದನಕರುಗಳು ಏಕಾಏಕಿ ರಸ್ತೆಗೆ ಬರುವುದ–ರಿಂದ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಾಗಿದೆ. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಇದರ ಜೊತೆಗೆ ರಸ್ತೆ ಬದಿಯಲ್ಲಿ ಎಲ್ಲೆಂದರಲ್ಲಿ ಕಸ ಹಾಕುತ್ತಿರುವುದರಿಂದ ದನಕರುಗಳು ಕಸದ ರಾಶಿಗಳ ಬಳಿ ಸೇರಿ ಕಸ ತಿನ್ನುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಇದ–ರಿಂದ ನಗರದ ಸ್ವಚ್ಛತೆಗೂ ಧಕ್ಕೆಯಾಗುವುದರ ಜೊತೆಗೆ ಸಾರ್ವಜನಿಕರ ಆರೋಗ್ಯ ಹಾಗೂ ಸುರಕ್ಷತೆಯ ಬಗ್ಗೆಯೂ ಆತಂಕ ವ್ಯಕ್ತವಾಗಿದೆ.

ಈ ಸಮಸ್ಯೆ ಹಲವು ದಿನಗಳಿಂದ ಮುಂದುವರಿದಿದ್ದರೂ ಸಂಬಂಧಪಟ್ಟ ಪುರಸಭೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಗರದ ಪ್ರಮುಖ ರಸ್ತೆಗಳಲ್ಲಿ ಬಿಡಾಡಿ ದನಗಳ ನಿಯಂತ್ರಣಕ್ಕೆ ಕೂಡಲೇ ಕ್ರಮ ಕೈಗೊಳ್ಳಬೇಕು ಹಾಗೂ ರಸ್ತೆಗೆ ದನಗಳನ್ನು ಬಿಡುವ ಮಾಲೀಕರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪುರಸಭೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ಪರಿಶೀಲಿಸಿ, ಬಿಡಾಡಿ ದನಗಳ ನಿಯಂತ್ರಣ ಹಾಗೂ ರಸ್ತೆ ಬದಿಯ ಕಸ ತೆರವುಗೊಳಿಸುವ ಮೂಲಕ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸ್ಥಳೀಯರು ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ವಿಶ್ವನಾಥ್ ಬಲ್ಲಿದವ್, ಮೋಹನ್ ಬಲ್ಲಿದವ್, ವಲಿ ಖುರೇಷಿ, ಬಾವದೀನ್ ಸಂಶುದ್ದೀನ್ ಪಾಶ ಸೇ–ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಶ್ರೀ ಕೃಷ್ಣ ಜನ್ಮಾಷ್ಟಮಿ ಜಗದೊಡೆಯ, ವಿಷ್ಣುವಿನ ಎಂಟನೇ ಅವತಾರವಾದ ಶ್ರೀಕೃಷ್ಣನ ಜನ್ಮದಿನ

ನೈಜ್ಯ ದೆಸೆ ನ್ಯೂಸ್

**ಶ್ರೀ ಕೃಷ್ಣ ಜನ್ಮಾಷ್ಟಮಿ ಎನ್ನುವುದು ಜಗದೊಡೆಯ, ವಿಷ್ಣುವಿನ ಎಂಟನೇ ಅವತಾರವಾದ ಶ್ರೀಕೃಷ್ಣನ ಜನ್ಮದಿನವನ್ನು ಆಚರಿಸುವ ಅತ್ಯಂತ ಪವಿತ್ರ ಹಾಗೂ ಸಡಗರದ ಹಿಂದೂ ಹಬ್ಬವಾಗಿದೆ. ಸನಾತನ ಧರ್ಮದಲ್ಲಿ ಕೃಷ್ಣನ ಜನ್ಮವು ಧರ್ಮದ ಸಂಸ್ಥಾಪನೆ ಹಾಗೂ ಅಧರ್ಮದ ನಾಶಕ್ಕಾಗಿ ನಡೆದ ದಿವ್ಯ ಲೀಲೆಯಾಗಿದೆ.**

ಪ್ರತಿ ವರ್ಷ ಭಾದ್ರಪದ ಮಾಸದ ಕೃಷ್ಣ ಪಕ್ಷದ ಅಷ್ಟಮಿ ತಿಥಿಯಂದು ಮಧ್ಯರಾತ್ರಿ ರೋಹಿಣಿ ನಕ್ಷತ್ರದಲ್ಲಿ ಕೃಷ್ಣನ ಜನನವಾಯಿತು ಎಂದು ಪುರಾಣಗಳು ಹೇಳುತ್ತವೆ. ಈ ಸುದಿನವನ್ನು ದೇಶಾದ್ಯಂತ ಗೋಕುಲಾಷ್ಟಮಿ, ಶ್ರೀಕೃಷ್ಣ ಜಯಂತಿ ಎಂದೂ ಸಹ ಕರೆಯಲಾಗುತ್ತದೆ. ಕೃಷ್ಣ ಜನ್ಮಾಷ್ಟಮಿಯ ಮಹತ್ವ, ಹಿನ್ನೆಲೆ ಹಾಗೂ ಆಚರಣೆಯ ಕುರಿತಾದ ಸಂಪೂರ್ಣ ಲೇಖನ ಇಲ್ಲಿದೆ. ಪೌರಾಣಿಕ ಹಿನ್ನೆಲೆ ಮತ್ತು ಜನನದ್ವಾಪರ ಯುಗದಲ್ಲಿ ಮಥುರಾವನ್ನು ಆಳುತ್ತಿದ್ದ ಕಂಸ ಎಂಬ ಕ್ರೂರ ರಾಜನ ಉಪಟಳ ಹೆಚ್ಚಾದಾಗ, ಭೂದೇವಿಯ ಭಾರವನ್ನು ಇಳಿಸಲು ಭಗವಾನ್ ವಿಷ್ಣು ಕೃಷ್ಣನಾಗಿ ಅವತರಿಸಿದನು. ಕಂಸನ ತಂಗಿ ದೇವಕಿ ಮತ್ತು ವಸುದೇವನ ಎಂಟನೇ ಮಗನೇ ತನ್ನನ್ನು ಕೊಲ್ಲುತ್ತಾನೆ ಎಂಬ ಆಕಾಶವಾಣಿಯನ್ನು ಕೇಳಿದ ಕಂಸ, ಅವರಿಬ್ಬರನ್ನೂ ಕಾರಾಗೃಹದಲ್ಲಿ ಬಂಧಿಸಿಟ್ಟಿದ್ದನು.ದೇವಕಿಯ ಎಂಟನೇ ಗರ್ಭದಿಂದ ಶ್ರೀಕೃಷ್ಣನು ಕಾರ್ಗತ್ತಲೆಯ ಮಧ್ಯರಾತ್ರಿ ಜನ್ಮತಳೆದನು.



ಆ ಸಮಯದಲ್ಲಿ ಭಗವಂತನ ಮಾಯೆಯಿಂದ ಕಾರಾಗೃಹದ ಬೀಗಗಳು ತೆರೆದುಕೊಂಡವು,

ಕಾವಲುಗಾರರು ನಿದ್ದೆಗೆ ಜಾ–ರಿದರು. ತಂದೆ ವಸುದೇವನು ನವಜಾತ ಶಿಶುವನ್ನು ಬುಟ್ಟಿಯಲ್ಲಿಟ್ಟುಕೊಂಡು, ಉಕ್ಕಿ ಹ–ರಿಯುತ್ತಿದ್ದ ಯಮುನಾ ನದಿಯನ್ನು ದಾಟಿ ಗೋಕುಲದ ನಂದರಾಜ ಮತ್ತು ಯಶೋದೆಯ ಮನೆಗೆ ತಲುಪಿಸಿದನು. ಹಾಗಾಗಿ ದೇವಕಿ ಜನ್ಮ ನೀಡಿದ ತಾಯಿಯಾದರೆ, ಯಶೋದೆ ಕೃಷ್ಣನನ್ನು ಪ್ರೀತಿಯಿಂದ ಸಾಕಿ ಬೆಳೆಸಿದ ತಾಯಿಯಾದಳು. ಹಬ್ಬದ ಆಚರಣೆಯ ವಿಧಿ–ವಿಧಾನಗಳುಉಪವಾಸ ಮತ್ತು ಜಾಗರಣೆ: ಭಕ್ತರು ಜನ್ಮಾಷ್ಟಮಿಯ ದಿನದಂದು ದಿನವಿಡೀ ಉಪವಾಸ ವ್ರತವನ್ನು ಆಚರಿಸುತ್ತಾರೆ.

ರಾತ್ರಿ ಕೃಷ್ಣನ ಜನನದ ಸಮಯದವರೆಗೆ ಭಜನೆ, ಕೀರ್ತನೆ ಹಾಗೂ ಶ್ರೀಮದ್ಭಗವದ್ಗೀತೆಯ ಪಠಣ ಮಾಡುತ್ತಾ ಜಾಗರಣೆ ಮಾಡುತ್ತಾರೆ. ಮಧ್ಯರಾತ್ರಿ ಪೂಜೆ: ಶ್ರೀಕೃಷ್ಣನು ಮಧ್ಯರಾತ್ರಿ ಜನಿಸಿದ ಕಾರಣ, ರಾತ್ರಿ 12 ಗಂಟೆಗೆ ಬಾಲಕೃಷ್ಣನ ಮೂರ್ತಿಗೆ ಹಾಲು, ಮೊಸರು, ತುಪ್ಪ, ಜೇನುತುಪ್ಪ ಮತ್ತು ಗಂಗಾಜಲದಿಂದ ಅಭಿಷೇಕ ಮಾಡಲಾಗುತ್ತದೆ.

ತೊಟ್ಟಿಲೋತ್ಸವ: ಬಾಲಕೃಷ್ಣನ ವಿಗ್ರಹವನ್ನು ಸುಂದರವಾದ ಸಣ್ಣ ತೊಟ್ಟಿಲಿನಲ್ಲಿ ಇಟ್ಟು, ಅಲಂಕರಿಸಿ ತೂಗುವ ಮೂಲಕ ಕೃಷ್ಣನ ಜನ್ಮವನ್ನು ಸಂಭ್ರಮಿಸಲಾಗುತ್ತದೆ.

ನೆಚ್ಚಿನ ನೈವೇದ್ಯ: ಕೃಷ್ಣನಿಗೆ ಪ್ರಿಯವಾದ ಬೆಣ್ಣೆ, ಮಜ್ಜಿಗೆ, ಅವಲಕ್ಕಿ ಪ್ರಸಾದ, ಲಡ್ಡು ಹಾಗೂ ವಿವಿಧ ಬಗೆಯ ಸಿಹಿ ತಿಂಡಿಗಳನ್ನು ತಯಾರಿಸಿ ನೈವೇದ್ಯ ಅರ್ಪಿಸಲಾಗುತ್ತದೆ. ಮನೆಮನೆಗಳಲ್ಲಿ ಕೃಷ್ಣನ ಹೆಜ್ಜೆ: ಸಣ್ಣ ಮಕ್ಕಳನ್ನು ಕೃಷ್ಣನಂತೆ ಅಲಂಕರಿಸುವುದು ಮತ್ತು ಮನೆಯ ಹೊಸ್ತಿಲಿನಿಂದ ಪೂಜಾ ಕೋಣೆಯವರೆಗೆ ಬಾಲಕೃಷ್ಣನ ಪುಟ್ಟ ಪಾದಗಳ ರಂಗೋಲಿ ಗುರುತನ್ನು ಹಾಕುವುದು ಈ ಹಬ್ಬದ ಪ್ರಮುಖ ಆಕರ್ಷಣೆಯಾಗಿದೆ.ವಿವಿಧ ಪ್ರಾಂತ್ಯಗಳಲ್ಲಿ ಜನ್ಮಾಷ್ಟಮಿಯ ವೈವಿಧ್ಯಭಾರತದ ಬೇರೆ ಬೇರೆ ಭಾಗಗಳಲ್ಲಿ ಇದನ್ನು ವಿಶಿಷ್ಟವಾಗಿ ಆಚರಿಸಲಾಗುತ್ತದೆ. ಮಥುರಾ ಮತ್ತು ಬೃಂದಾವನ: ಕೃಷ್ಣನ ಜನ್ಮಭೂಮಿಯಾದ ಇಲ್ಲಿ ತಿಂಗಳುಗಟ್ಟಲೆ ಮುಂಚಿತವಾಗಿಯೇ ಸಿದ್ಧತೆಗಳು ನಡೆದು, ಭವ್ಯವಾದ ರಾಸಲೀಲಾ ನೃತ್ಯ ರೂಪಕಗಳು ಜರುಗುತ್ತವೆ.

ದಹಿ ಹಂಡಿ (ಮೊಸರು ಕುಡಿಕೆ ಉತ್ಸವ): ಮಹಾರಾಷ್ಟ್ರ ಮತ್ತು ಉತ್ತರ ಭಾರತದ ಭಾಗಗಳಲ್ಲಿ ಯುವಕರು ಮಾನವ ಪಿರಮಿಡ್‌ಗಳನ್ನು ನಿರ್ಮಿಸಿ, ಎತ್ತರದಲ್ಲಿ ಕಟ್ಟಲಾದ ಮೊಸರು–ಬೆಣ್ಣೆಯ ಮಡಕೆಯನ್ನು ಒಡೆಯುವ 'ದಹಿ ಹಂಡಿ' ಸ್ಪರ್ಧೆಯನ್ನು ಅತ್ಯಂತ ಸಡಗರದಿಂದ ಆಡುತ್ತಾರೆ. ಉಡುಪಿ ಶ್ರೀಕೃಷ್ಣ ಮಠ : ಕರ್ನಾಟಕದ ಕರಾವಳಿ ಭಾಗದಲ್ಲಿ, ವಿಶೇಷವಾಗಿ ಉಡ–'ಪಿಯಲ್ಲಿ ಲೀಲೋತ್ಸವ ಹಾಗೂ 'ವಿಟ್ಲಪಿಂಡಿ' (ಮೊಸರು ಕುಡಿಕೆ) ಉತ್ಸವವು ಜಗತ್ಪ್ರಸಿದ್ಧವಾಗಿದೆ. ಆಧ್ಯಾತ್ಮಿಕ ಸಂದೇಶಶ್ರೀಕೃಷ್ಣನ ಜೀವನ ಮತ್ತು ಅವನು ಬೋಧಿಸಿದ ಭಗವದ್ಗೀತೆ ಮಾನವಕುಲಕ್ಕೆ ಸಾರ್ವಕಾಲಿಕ ಮಾರ್ಗದರ್ಶಿಯಾಗಿದೆ. ಕೃಷ್ಣನು ಭಗವದ್ಗೀತೆಯಲ್ಲಿ ಹೇಳಿದ "ಕರ್ಮಣ್ಯೇವಾಧಿಕಾರಸ್ತೇ ಮಾ ಫಲೇಷು ಕದಾಚನ" ಎಂಬ ಶ್ಲೋಕವು, ಮನುಷ್ಯನು ಫಲದ ನಿರೀಕ್ಷೆಯಿಲ್ಲದೆ ತನ್ನ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡಬೇಕು ಎಂಬ ಮಹತ್ತರ ಸಂದೇಶವನ್ನು ನೀಡುತ್ತದೆ.

ಕೃಷ್ಣನ ಜನ್ಮವು ಕೇವಲ ಒಂದು ಹಬ್ಬವಲ್ಲ; ಅದು ನಮ್ಮೊಳಗಿನ ಅಹಂಕಾರವನ್ನು (ಕಂಸ) ಅಳಿಸಿ, ಪ್ರೀತಿ ಮತ್ತು ಆನಂದವನ್ನು (ಕೃಷ್ಣ) ಜಾಗೃತಗೊಳಿಸುವ ಆಧ್ಯಾತ್ಮಿಕ ಸಂಕೇತವಾಗಿದೆ. ಶ್ರೀ ಕೃಷ್ಣ ಜನ್ಮಾಷ್ಟಮಿಯು ಸಮಾಜದಲ್ಲಿ ಸೌಹಾರ್ದತೆ, ಭಕ್ತಿ ಮತ್ತು ಒಗ್ಗಟ್ಟನ್ನು ಮೂಡಿಸುವ ಅದ್ಭುತ ಹಬ್ಬವಾಗಿದೆ. ಅಧರ್ಮ ಹೆಚ್ಚಾದಾಗ ಧರ್ಮ ರಕ್ಷಣೆಗಾಗಿ ಭಗವಂತ ಧರೆಗಿಳಿಯುತ್ತಾನೆ ಎಂಬ ನಂಬಿಕೆಯನ್ನು ಈ ದಿನವು ಪುನರುಚ್ಚರಿಸುತ್ತದೆ. ಕೃಷ್ಣನ ಆದರ್ಶಗಳು ಮತ್ತು ಬೋಧನೆಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಈ ಜನ್ಮಾಷ್ಟಮಿ ಆಚರಣೆಗೆ ನಿಜವಾದ ಸಾರ್ಥಕತೆ ದೊರೆಯುತ್ತದೆ.

## ವಚನ ದರ್ಶನ

ಕಾಗೆ ಒಂದಗುಳ ಕಂಡಡೆ ಕರೆಯದೆ ತನ್ನ ಬಳಗವನು ಕೋಳಿ ಒಂದು ಕುಟುಕ ಕಂಡಡೆ ಕೂಗಿ ಕರೆಯದೆ ತನ್ನ ಕುಲವನೆಲ್ಲವ ಶಿವಭಕ್ತನಾಗಿ ಭಕ್ತಿಪಕ್ಷವಿಲ್ಲದಿದ್ದಡೆ ಕಾಗೆ ಕೋಳಿ?ಂದ ಕರಕಷ್ಟ ಕೂಡಲಸಂಗಮದೇವಾ

ಇದು ಬಸವಣ್ಣನವರ ಪ್ರಸಿದ್ಧ ವಚನವಾಗಿದೆ. ಕಾಗೆಯು ತನಗೆ ಸಿಕ್ಕ ಆಹಾರವನ್ನು ತನ್ನ ಬಳಗದೊಂದಿಗೆ ಹಂಚಿಕೊಳ್ಳುವಂತೆ, ಶಿವಭಕ್ತನಾದವನು ಎಲ್ಲರೊಂದಿಗೆ ಪ್ರೀತಿ-ವಿಶ್ವಾಸದಿಂದ ಇರಬೇಕು ಎಂಬ ಸಂದೇಶವನ್ನು ಈ ವಚನವು ಸಾರುತ್ತದೆ.

ಪಕ್ಷಿಗಳ ಸದ್ಗುಣ ಒಂದು ಕಾಗೆಗೆ ಸಣ್ಣ ಅನ್ನದ ಅಗುಳು ಮೆತುಳು ಸಿಕ್ಕರೂ ಸಹ, ಅದು ಒಂಟಿಯಾಗಿ ತಿನ್ನದೆ "ಕಾ ಕಾ" ಎಂದು ಕೂಗಿ ತನ್ನ ಇಡೀ ಬಳಗವನ್ನು ಕರೆದು ಹಂಚಿಕೊಂಡು ತಿನ್ನುತ್ತದೆ. ಹಾಗೆಯೇ, ಒಂದು ಕೋಳಿಗೆ ನೆಲದ ಮೇಲೆ ಸಣ್ಣ ಆಹಾರದ ಕಣ ಸಿಕ್ಕರೂ, ಅದು ತನ್ನ ಇಡೀ ಕುಲವನ್ನು ಧ್ವನಿ ಮಾಡಿ ಕರೆಯುತ್ತದೆ.ಮನುಷ್ಯನಿಗೆ ಎಚ್ಚರಿಕೆ ಆದರೆ ಮನುಷ್ಯನು ಶಿವನ ಭಕ್ತನೆಂದು ಹೇಳಿಕೊಳ್ಳುತ್ತಾ, ತನ್ನವರ ಬಗ್ಗೆ ಪ್ರೀತಿ, ಕರುಣೆ ಅಥವಾ ಹಂಚಿಕೊಳ್ಳುವ ಭಕ್ತಿಪಕ್ಷ ಒಲವು/ಬಾಂಧವ್ಯ ಹೊಂದಿಲ್ಲದಿದ್ದರೆ, ಅವನು ಕಾಗೆ ಮತ್ತು ಕೋಳಿಗಳಿಗಿಂತಲೂ ಕಡೆಯಾದವನು ಕರಕಷ್ಟ ಎಂದು ಬಸವಣ್ಣನವರು ಹೇಳುತ್ತಾರೆ. ನಮಗೆ ಶರಣರ ವಚನಗಳು ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

# ಗೃಹ ಸಚಿವ ಜಿಲ್ಲೆಯಲ್ಲಿ ಲಂಚ ಸ್ವೀಕರಿಸುವ ವೇಳೆ ಇಬ್ಬರು ಪೊಲೀಸ್ ಕಾನ್ಸ್ಟೇಬಲ್‌ಗಳು ಲೋಕಾಯುಕ್ತ ಬಲೆಗೆ

❑ ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಕರ್ನಾಟಕ ಲೋಕಾಯುಕ್ತ ಕಲಬುರಗಿ ಪೊಲೀಸ್ ಅಧೀಕ್ಷಕ ಸಿದ್ಧರಾಜು ಸಿ. ಅವರ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ, ಲಂಚ ಸ್ವೀಕರಿಸುತ್ತಿದ್ದರೆಂದು ಆರೋಪಿಸಲಾದ ಬ್ರಹ್ಮಪುರ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಕಾನ್ಸ್ಟೇಬಲ್‌ಗಳು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.**

ಬ್ರಹ್ಮಪುರ ಪೊಲೀಸ್ ಠಾಣೆಯ ಪರಶುರಾಮ್ ಮತ್ತು ವೀರೇಶ್ ಎಂಬ ಇಬ್ಬರು ಪೊಲೀಸ್ ಕಾನ್ಸ್ಟೇಬಲ್‌ಗಳ ವಿರುದ್ಧ ಲಂಚದ ಬೇಡಿಕೆ ಇಟ್ಟ ಆರೋಪ ಕೇಳಿಬಂದಿದೆ.



ದೂರುದಾರ ಕನ್ನರಾಜು ಪಾಟೀಲ್, ಬಾಪುನಗರ, ಕಲಬುರಗಿ ಅವರು ನೀಡಿದ ದೂರಿನ ಆದ-,ಾರದ ಮೇಲೆ ಲೋಕಾಯುಕ್ತ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ ಎನ್ನಲಾಗಿದೆ. ದೂರುದಾರರ ಮಗ ಕಾರ್ತಿಕ್ ಕಳ್ಳತನ ಹಾಗೂ ರಾಬರಿ ಪ್ರಕರಣಗಳಲ್ಲಿ ಭಾಗಿಯಾಗಿದ್ದಾನೆ ಎಂದು ಹೆದರಿಸಿ, ಆತನನ್ನು ಗಡಿಪಾರು ಮಾಡುತ್ತೇವೆ ಎಂದು ಬೆದರಿಸಿ ಹಣಕ್ಕೆ ಬೇಡಿಕೆ ಇಟ್ಟಿದ್ದರು ಎಂಬುದು ದೂರಿನಲ್ಲಿರುವ ಆರೋಪ.

ಮೊದಲಿಗೆ ಒಂದು ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟು, 50 ಸಾವಿರ ರೂಪಾಯಿ ಮುಂಗಡವಾಗಿ ಪಡೆದಿದ್ದರು ಎನ್ನಲಾಗಿದ್ದು, ನಂತರ ಮತ್ತೆ 20 ಸಾವಿರ ರೂಪಾಯಿ ನೀಡುವಂತೆ ಬೇಡಿಕೆ ಇಟ್ಟಿದ್ದರು ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾ-ರಿಗಳು ಕಾರ್ಯಾಚರಣೆ ನಡೆಸಿದ್ದು, 20 ಸಾವಿರ ರೂಪಾಯಿ ನಗದು ಸ್ವೀಕ-ರಿಸುವ ಸಂದರ್ಭದಲ್ಲಿ ಇಬ್ಬರು ಪೊಲೀಸ್ ಕಾನ್ಸ್ಟೇಬಲ್‌ಗಳು ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿದುಬಂದಿದೆ. ಲೋಕಾಯುಕ್ತ ಅಧಿಕಾರಿಗಳಿಂದ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದ್ದು, ತನಿಖೆ ಪೂರ್ಣಗೊಂಡ ಬಳಿಕ ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ತಿಳಿಸಲಾಗಿದೆ. ಈ ಪ್ರಕರಣದಲ್ಲಿ ಆರೋಪಗಳು ತನಿಖೆಯ ಹಂತದಲ್ಲಿದ್ದು, ನ್ಯಾಯಾಲಯದ ಅಂತಿಮ ತೀರ್ಪಿನ ಆಧಾರದ ಮೇಲೆಯೇ ಆರೋಪಿಗಳ ತಪ್ಪಿತಸ್ಥತೆ ನಿರ್ಧಾರವಾಗಲಿದೆ.

# ನಂದಿನಿ ಹಾಲಿನ ಟ್ಯಾಂಕರ್ ಪಲ್ಟಿ: 14 ಸಾವಿರ ಲೀಟರ್ ಹಾಲು ರಸ್ತೆಪಾಲು

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಗರದ ಹೆಬ್ಬಾಳ ಸಮೀಪದ ಸರ್ವಿಸ್ ರಸ್ತೆಯಲ್ಲಿ ನಂದಿನಿ ಹಾಲು ಸಾಗಿಸುತ್ತಿದ್ದ ಟ್ಯಾಂಕರ್ ಪಲ್ಟಿಯಾಗಿ ಸುಮಾರು 14 ಸಾವಿರ ಲೀಟರ್ ಹಾಲು ರಸ್ತೆಪಾಲಾಗಿರುವ ಘಟನೆ ನಡೆದಿದೆ.**

KMF ಕೇಂದ್ರದತ್ತ ತೆರಳುತ್ತಿದ್ದ ಹಾಲಿನ ಟ್ಯಾಂಕರ್ ನಿಯಂತ್ರಣ ತಪ್ಪಿ ಸರ್ವಿಸ್ ರಸ್ತೆಯಲ್ಲಿ ಪಲ್ಟಿಯಾಗಿದೆ ಎನ್ನಲಾಗಿದೆ. ಅಪಘಾತದ ಪರಿಣಾಮ ಟ್ಯಾಂಕರ್‌ನಲ್ಲಿದ್ದ ಹಾಲು ರಸ್ತೆಗೆ ಸೋರಿದ್ದು, ಕ್ಷಣಾರ್ಧದಲ್ಲಿ ರಸ್ತೆಯಲ್ಲೆಲ್ಲ ಹಾಲು ಹರಿದುಹೋಗಿದೆ. ಅಪಘಾತದಲ್ಲಿ ಟ್ಯಾಂಕರ್ ಚಾಲಕ ಗಂಭೀರವಾಗಿ ಗಾಯಗೊಂಡಿದ್ದು, ಕೂಡಲೇ



ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಚಾಲಕನ ಸ್ಥಿತಿ ಕುರಿತು ಹೆಚ್ಚಿನ ವಿವರಗಳು ಇನ್ನಷ್ಟೇ ಲಭ್ಯವಾಗಬೇಕಿದೆ.

ಟ್ಯಾಂಕರ್‌ನಿಂದ ಹಾಲು ರಸ್ತೆಗೆ ಸೋರಿದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಕುತೂಹಲದ ವಾತಾವರಣ ನಿರ್ಮಾಣವಾಗಿತ್ತು. ಇದೇ ವೇಳೆ ಶಾಲೆಯಿಂದ ತೆರಳುತ್ತಿದ್ದ ಕೆಲವು ಮಕ್ಕಳು ಸೇರಿದಂತೆ ಸ್ಥಳೀಯರು ಬಾಟಲಿ, ಕ್ಯಾನ್ ಸೇರಿದಂತೆ ಸಿಕ್ಕ ಸಿಕ್ಕ ಪಾತ್ರೆಗಳಲ್ಲಿ ರಸ್ತೆಗೆ ಹರಿದ ಹಾಲನ್ನು ತುಂಬಿಕೊಳ್ಳುತ್ತಿರುವ ದೃಶ್ಯಗಳು ಕಂಡುಬಂದಿವೆ. ವಿಶೇಷವಾಗಿ ಶಾಲಾ ಮಕ್ಕಳು ಬಾಟಲಿಗಳಲ್ಲಿ ಹಾಲು ತುಂಬಿಕೊಳ್ಳುತ್ತಿರುವ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ಗಮನ ಸೆಳೆಯುತ್ತಿದೆ. ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಪೊಲೀಸರು ಹಾಗೂ ಸಂಬಂಧಪಟ್ಟ ಸಿಬ್ಬಂದಿ ಧಾವಿಸಿ ಪರಿಸ್ಥಿತಿ ನಿಯಂತ್ರಿಸಿದರು. ಪಲ್ಟಿಯಾಗಿರುವ ಟ್ಯಾಂಕರ್ ತೆರವುಗೊಳಿಸುವ ಕಾರ್ಯವೂ ನಡೆಯಿತು.

ಏಒಈ ರಾಜ್ಯದ ಪ್ರಮುಖ ಹಾಲು ಸಹಕಾರಿ ಸಂಸ್ಥೆಯಾಗಿದ್ದು, 'ನಂದಿನಿ' ಬ್ರ್ಯಾಂಡ್ ಮೂಲಕ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಗ್ರಾಹಕ-ರಿಗೆ ಪೂರೈಸುತ್ತದೆ. ರಾಜ್ಯದಲ್ಲಿ ಸಾವಿರಾರು ಹಾಲು ಉತ್ಪಾದಕರಿಂದ ಸಂಗ್ರಹವಾಗುವ ಹಾಲು ಶೀತ ಸರಪಳಿ ಮೂಲಕ ಸಂಸ್ಕರಣಾ ಮತ್ತು ವಿತರಣಾ ವ್ಯವಸ್ಥೆಗೆ ಸಾಗುತ್ತದೆ.

ಈ ನಡುವೆ, ಅಪಘಾತಕ್ಕೆ ನಿಖರ ಕಾರಣ ಏನು, ಚಾಲಕನ ನಿಯಂತ್ರಣ ತಪ್ಪಲು ಕಾರಣವೇನು ಹಾಗೂ ಟ್ಯಾಂಕರ್‌ನಲ್ಲಿ ಸಾಗಿಸಲಾಗುತ್ತಿದ್ದ ಹಾಲಿನ ಸಂಪೂರ್ಣ ಪ್ರಮಾಣ ಎಷ್ಟಿತ್ತು ಎಂಬ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಅಧಿಕೃತ ಮಾಹಿತಿ ನಿರೀಕ್ಷಿಸಲಾಗಿದೆ.

# ಸಾಹುಕಾರ್‌ಗೆ ಮತ್ತೆ ನೋಟಿಸ್

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗ(ಕೆಪಿ-ಎಸ್‌ಸಿ) ಪಶುವೈದ್ಯರ ಅಕ್ರಮ ನೇಮಕಾತಿ ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ಸಿಐಡಿ ಅಧಿಕಾರಿಗಳು ಮಾಜಿ ಅಧ್ಯಕ್ಷ ಸಾಹುಕಾರ್ ಶಿವಶಂಕರಪ್ಪಗೆ ಮತ್ತೆ ನೋಟಿಸ್ ನೀಡಿದ್ದಾರೆ.**



ಪ್ರಕರಣದ ಸಂಬಂಧ ಇಂದು ಇಲ್ಲವೇ ನಾಳೆ ವಿಚಾರಣೆಗೆ ಹಾಜರಾಗುವಂತೆ ನೋಟೀಸ್ ನಲ್ಲಿ ಸೂಚಿಸಲಾಗಿದೆ. ಸಿಐಡಿ ಅಧಿಕಾರಿಗಳ ಈಗಾಗಲೇ ಒಮ್ಮೆ ಶಿವಶಂಕರಪ್ಪ ವಿಚಾರಣೆ ನಡೆಸಿತ್ತು. ಕೆಲ ದಿನಗಳ ತನಿಖೆ ನಂತರ ಮತ್ತೆ ನೋಟಿಸ್ ನೀಡಲಾಗಿದ್ದು, ಮತ್ತೊಂದೆಡೆ ಹೈಕೋರ್ಟ್‌ನಲ್ಲಿ ಬಂಧನ ರಕ್ಷಣೆ ಕೋರಿ ಶಿವಶಂಕರಪ್ಪ ಸಲ್ಲಿಸಿದ್ದ ಅರ್ಜಿ ಸಂಬಂಧ ಆದೇಶ ಬರುವುದು ಇನ್ನೂ ಬಾಕಿಯಿದೆ. ಕೆಪಿಎಸ್ಸಿಯಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಕೆಲ ದಿನಗಳ ಹಿಂದೆ ಸಿಐಡಿ ಅಧಿಕಾರಿಗಳು ಸಾಹುಕಾರ್ ಶಿವಶಂಕರಪ್ಪ ಅವರನ್ನು ವಿಚಾರಣೆ ಕೈಗೊಂಡಿದ್ದರು. ಸಿಐಡಿ ಅಧಿಕಾರಿಗಳು ಕೆಪಿಎಸ್ ಸಿಗೆ ಸಂಬಂಧಿಸಿದ ವಿವಿಧ ಸ್ಥಳಗಳ ಮೇಲೆ ಶೋಧ ನಡೆಸಿದ ಬಳಿಕ ನೀಡಿದ್ದ ನೊಟೀಸ್ ಗೆ ಸಾಹುಕಾರ್ ವಿಚಾರಣೆಗೆ ಹಾಜರಾಗಿದ್ದರು. 400 ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯ ಅಂತಿಮ ಆಯ್ಕೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಕೆಪಿಎಸ್ ಸಿ ತೀವ್ರ ಟೀಕೆಗೆ ಗುರಿಯಾಗಿದೆ. ಅಭ್ಯರ್ಥಿಗಳ ಆಯ್ಕೆಗಾಗಿ ಮಧ್ಯವರ್ತಿಗಳು ಕೆಲ ಅಭ್ಯರ್ಥಿಗಳಿಗೆ ಕರೆ ಮಾಡಿ ತಲಾ 70 ಲಕ್ಷದಿಂದ 80 ಲಕ್ಷ ರೂಪಾಯಿಗಳವರೆಗೆ ಲಂಚದ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಾನಸೌಧ ಪೊಲೀಸರು ಎಫ್‌ಐಆರ್‌ಗಳನ್ನು ದಾಖಲಿಸಿದ್ದರು ಇದಲ್ಲದೆ, ಕೆಪಿಎಸ್‌ಸಿ ಅಧಿಕಾರಿಗಳು ಹಲವು ಅಭ್ಯರ್ಥಿಗಳನ್ನು ರೆಸಾರ್ಟ್‌ಗೆ ಕರೆದೊಯ್ದು, ಉತ್ತರಗಳೊಂದಿಗೆ ಪ್ರಶ್ನೆಪತ್ರಿಕೆಗಳನ್ನು ನೀಡಿದ್ದರು ಎಂಬ ಆರೋಪವೂ ಕೇಳಿಬಂದಿದೆ. ಹೆಚ್ಚಿನ ಅಂಕಗಳನ್ನು ಪಡೆದ ಕೆಲ ಅಭ್ಯರ್ಥಿಗಳು ಕೆಪಿಎಸ್ ಸಿಯ ಉನ್ನತ ಹುದ್ದೆಯಲ್ಲಿರುವವರ ಸಂಬಂಧಿಕರು ಎಂದು ಶಂಕಿಸಲಾಗಿದೆ. ಗ್ಯಾನೇಂದ್ರ ವಿರುದ್ಧ ಮತ್ತೊಂದು ಕೇಸ್ : ಈ ನಡುವೆ ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ)ಪಶುವೈದ್ಯರ ಅಕ್ರಮ ನೇಮಕಾತಿ ಪ್ರಕರಣದಲ್ಲಿ ಬಂಧಿತ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಕೇಸ್ ದಾಖಲಿಸಲಾಗಿದೆ. ಸರ್ಕಾರಿ ಹುದ್ದೆ ಮತ್ತು ಕಚೇರಿಯನ್ನು ದುರುಪಯೋಗ ಪಡಿಸಿಕೊಂಡ ಹಿನ್ನೆಲೆಯಲ್ಲಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಹಣದ ಆಮೀಷದಿಂದ ಸರ್ಕಾರದ ಹುದ್ದೆಗೆ ಮೋಸ ಮಾಡಿದ ಹಿನ್ನೆಲೆಯಲ್ಲಿ ಎಫ್‌ಐಆರ್‌ನಲ್ಲಿ ಸಂಬಂಧಿತ ಸೆಕ್ಷನ್ ಸೇರಿಸಲಾಗಿದೆ. ಕೆಪಿಎಸ್‌ಸಿ ಕಚೇರಿಯಲ್ಲಿ ಸಿಐಡಿ ಅಧಿಕಾರಿಗಳು ಇಂದು ಮಹಜರು ನಡೆಸಿದರು.ಪ್ರಶ್ನೆಪತ್ರಿಕೆ ಲೀಕ್ ಆಗಿದ್ದ ಹಿನ್ನೆಲೆ ಗ್ಯಾನೇಂದ್ರ ಕೊಠಡಿಯಲ್ಲಿ ಮಹಜರು ನಡೆಸಲಾಗಿದೆ. ಬಳಿಕ ಗ್ಯಾನೇಂದ್ರ ಅವರನ್ನು ಸಿಐಡಿ ಅಧಿಕಾರಿಗಳು ಕರೆದುಕೊಂಡು ಹೋಗಿದ್ದಾರೆ.


# ಮಹಿಳಾ ಪಿಎಸ್‌ಐ ಕೆನ್ನೆಗೆ ಹೊಡೆದ ಪ್ರಕರಣ : ಬಿಜೆಪಿ ಶಾಸಕನ ಪುತ್ರಿಗೆ ಬಂಧನ ಭೀತಿ

❑ ನೈಜ್ಯ ದೆಸೆ ನ್ಯೂಸ್

**ಮಂಡ್ಯ: ಕರ್ತವ್ಯನಿರತ ಮಹಿಳಾ ಪಿಎಸ್‌ಐ ಕೆನ್ನೆಗೆ ಹೊಡೆದ ಆರೋಪ ಎದುರಿಸುತ್ತಿರುವ ತುಮಕೂರು ಗ್ರಾಮಾಂತರ ಕ್ಷೇತ್ರದ ಬಿಜೆಪಿ ಶಾಸಕ ಬಿ. ಸುರೇಶ್‌ಗೌಡ ಅವರ ಪುತ್ರಿ ಐಶ್ವರ್ಯ ಅವರಿಗೆ ಸಂಕಷ್ಟ ಎದುರಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಐಶ್ವರ್ಯ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಶ್ರೀರಂಗಪಟ್ಟಣ ನ್ಯಾಯಾಲಯ ವಜಾಗೊಳಿಸಿದೆ.**

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಆರತಿ ಉಕ್ಕಡ ದೇವಸ್ಥಾನದಲ್ಲಿ ಆಗಸ್ಟ್ 12ರಂದು ಭೀಮನ ಅಮಾವಾಸ್ಯೆ ಹಿನ್ನೆಲೆಯಲ್ಲಿ ಸಾವಿರಾರು ಭಕ್ತರು ಸೇ-ರಿದ್ದ ಸಂದರ್ಭದಲ್ಲಿ ಘಟನೆ ನಡೆದಿತ್ತು.

ದೇವಸ್ಥಾನದಲ್ಲಿ ಭದ್ರತಾ ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಬಿ. ಪಾಟೀಲ್ ಅವರು ದರ್ಶನಕ್ಕೆ ಹೆಚ್ಚಿನ ಜನದಟ್ಟಣೆ ಇರುವುದ-



ರಿಂದ ಗರ್ಭಗುಡಿ ಪ್ರವೇಶಕ್ಕೆ ಅವಕಾಶ ನೀಡಲು ಸಾಧ್ಯವಿಲ್ಲ ಎಂದು ಐಶ್ವರ್ಯ ಅವರಿಗೆ ತಿಳಿಸಿದ್ದರು.

ಇದೇ ವೇಳೆ ಮಫ್ತಿಯಲ್ಲಿ ಕರ್ತವ್ಯದಲ್ಲಿದ್ದ ಸರ್ಕಲ್ ಇನ್ಸ್‌ಪೆಕ್ಟರ್ ಗರ್ಭಗುಡಿಯತ್ತ ತೆರಳಿದ್ದನ್ನು ಐಶ್ವರ್ಯ ಪ್ರಶ್ನಿಸಿದ್ದು, ಅವರು ಕರ್ತವ್ಯದಲ್ಲಿರುವ ತಮ್ಮ ಮೇಲಾಧಿಕಾರಿ ಎಂದು ಪಿಎಸ್‌ಐ ಸ್ಪಷ್ಟಪಡಿಸಿದ್ದರು ಎನ್ನಲಾಗಿದೆ. ಬಳಿಕ ಮಾತಿಗೆ ಮಾತು ಬೆಳೆದು, ಐಶ್ವರ್ಯ ಅವರು ಪಿಎಸ್‌ಐಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಕಪಾಳಕ್ಕೆ ಹೊಡೆದಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಶಾಸಕನ ಪುತ್ರಿ ಪಿಎಸ್ ಐಗೆ ಹೊಡೆಯುವ ದೃಶ್ಯಗಳು ಸಾಮಾಜಿ-ಕ ಜಾಲತಾಣಗಳಲ್ಲಿ ಈಗಾಗಲೇ ವೈರಲ್ ಆಗಿವೆ. ಘಟನೆ ಸಂಬಂಧ ಪಿಎಸ್‌ಐ ಸವಿತಾ ಅವರ ದೂರಿನ ಆಧಾರದ ಮೇಲೆ ಕ್ಯಾತನಹಳ್ಳಿ ಪೊಲೀಸ್ ಠಾಣೆಯಲ್ಲಿ ಐಶ್ವರ್ಯ ವಿರುದ್ಧ ಃಓಖನ 132, 115(2), 352 ಹಾಗೂ 351(2) ರ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಪ್ರಕರಣ ಬೆಳಕಿಗೆ ಬಂದ ಬಳಿಕ ಶಾಸಕ ಸುರೇಶ್‌ಗೌಡ ಅವರು ಪುತ್ರಿಯ ಪರವಾಗಿ ಸಾರ್ವಜನಿಕವಾಗಿ ಕ್ಷಮೆಯಾಚಿಸಿದ್ದರು. ಸಾರ್ವಜನಿಕ ಜೀವನದಲ್ಲಿರುವವರು ತಾಳ್ಮೆ ಕಳೆದುಕೊಳ್ಳಬಾರದು ಎಂದು ಹೇಳಿದ್ದ ಅವರು, ಕಾನೂನು ಪ್ರಕಾರ ಕ್ರಮ ಎದುರಿಸುವುದಾಗಿ ತಿಳಿಸಿದ್ದರು. ಇದೀಗ ಜಾಮೀನು ಅರ್ಜಿಯೂ ವಜಾಗೊಂಡಿರುವ ಹಿನ್ನೆಲೆಯಲ್ಲಿ ಐಶ್ವರ್ಯ ಅವರನ್ನು ಪೊಲೀಸರು ಬಂಧಿಸುವ ಸಾಧ್ಯತೆ ಇದೆ

# ಹನೂರು ಅರಣ್ಯದಲ್ಲಿ ಮತ್ತೆ ವನ್ಯಪ್ರಾಣಿ ಬೇಟೆ

❑ ನೈಜ್ಯ ದೆಸೆ ನ್ಯೂಸ್

**ಹನೂರು: ಮಲೆಮಹದೇಶ್ವರ ವನ್ಯ ಜೀವಿಧಾಮದಲ್ಲಿ ಮತ್ತೆ ವನ್ಯಪ್ರಾಣಿ ಬೇಟೆ ಪ್ರಕರಣ ಬೆಳಕಿಗೆ ಬಂದಿದೆ. ಶಾಗ್ಯ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಕಾವೇರಿ ವನ್ಯಜೀವಿಧಾಮದ ಹೊಳೆಮುರಿದಟ್ಟಿ ಕರಿಕಲ್ಲು ಗುಡ್ಡದಲ್ಲಿ ಅರಣ್ಯ ಅಧಿಕಾರಿಗಳು ಮತ್ತು ಕಳ್ಳ ಬೇಟೆಗಾರರ ನಡುವೆ ನಡೆದ ಗುಂಡಿನ ಕಾಳಗದ ಸದ್ದು ಬೆಚ್ಚಿ ಬೀಳಿಸುವ ಘಟನೆ ಬೆನ್ನಲ್ಲೇ ಈ ಘಟನೆ ನಡೆದಿದೆ.**

ತಾಲ್ಲೂಕಿನ ಅಜ್ಜೀಪುರ ಗ್ರಾಮದ ಹೊರ ವಲಯ ಉಡುತೊರೆ ಜಲಾಶಯದ ಹಿನ್ನೀರಿನ ಪ್ರದೇಶದಲ್ಲಿ ನೀರಿನ ದಾಹ ನೀಗಿಸಿಕೊಳ್ಳಲು ಕಾಡಿನಿಂದ ಬಂದಿದ್ದ ಕಡವೆ ಮೇಲೆ ಕಳ್ಳ ಬೇಟೆಗಾರರ ದುಷ್ಕರ್ಮಿಗಳ ತಂಡದ ಗುಂಪು ನಾಡ ಬಂದೂಕಿನಿಂದ ಗುಂಡು ಹಾರಿಸಿ ವನ್ಯ ಪ್ರಾಣಿಯನ್ನು



ಬೇಟೆಯಾಡಿ ನಿರ್ದಾಕ್ಷಿಣ್ಯವಾಗಿ ಕೊಂದು ಹಾಕಿದ್ದಾರೆ.ನಂತರ ಅದನ್ನು ಮೂರು ಭಾಗಗಳಾಗಿ ಕತ್ತರಿಸಿ ಮೂರು ಚೀಲಗಳಲ್ಲಿ ತುಂಬಿಕೊಂಡು ತಲೆ ಮೇಲೆ ಹೊತ್ತು ಸಾಗಿಸುತ್ತಿದ್ದರು. ಖಚಿತ ಮಾಹಿತಿ ಮೇರೆಗೆ ಸ್ಥಳಕ್ಕೆ ಆಗಮಿಸಿ ದಾಳಿ ನಡೆಸಿದ ಅರಣ್ಯ ಇಲಾಖೆ ಸಿಬ್ಬಂದಿಯನ್ನು ಕಂಡು ಆರೋಪಿಗಳು ಕಡವೆ ಮಾಂಸದ ಚೀಲಗಳನ್ನು ಸ್ಥಳದಲ್ಲೇ ಬಿಟ್ಟು ದಟ್ಟಾರಣ್ಯದಲ್ಲಿ ಪರಾರಿಯಾಗಿದ್ದಾರೆ.

ಸ್ಥಳಕ್ಕೆ ಬಫರ್ ವಲಯದ ವಲಯ ಅರಣ್ಯಾಧಿಕಾರಿ ಮಹೇಶ್ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡು ಪರಾ-ರಿಯಾಗಿರುವ ಬೇಟೆಗಾರರ ಪತ್ತೆಗೆ ಬಲೆ ಬೀಸಿದ್ದಾರೆ. ಆರೋಪಿಗಳ ಪತ್ತೆಗಾಗಿ ಶ್ವಾನದಳ ತಂಡದಿಂದ ಕೋಬಿಂಗ್ ನಡೆಸಲಾಗಿರುತ್ತದೆ. ಮತ್ತು ತನಿಖಾ ತಂಡದಿಂದ ಕಾರ್ಯವು ಪ್ರಗತಿಯಲ್ಲಿರುತ್ತದೆ.ಕಾರ್ಯಾಚರಣೆಯನ್ನು ಪ್ರಭಾರ ಉಪ ಅರಣ್ಯ ಸಂರಕ್ಷಣಾಧಿಕಾರಿ ವಿರಾಜ್ ಶ್ರೀಕಾಂತ್ ಹೊಸೂರು ರವರ ಮಾರ್ಗದರ್ಶನದಂತೆ ವಲಯ ಅರಣ್ಯಾಧಿಕಾರಿ ಮಹೇಶ ಹೆಚ್.ಎನ್ ನೇತೃತ್ವದಲ್ಲಿ ಉಪ ವಲಯ ಅರಣ್ಯಾಧಿಕಾರಿ ನಂದೀಶ್ ಎಸ್.ಬಿ ಮತ್ತು ಇತರ ಸಿಬ್ಬಂದಿಗಳ ತಂಡ ದಾಳಿಯಲ್ಲಿ ಪಾಲ್ಗೊಂಡಿದ್ದರು.


ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಫೆ.8ರಿಂದ 12ರವರೆಗೆ ಬೆಂಗಳೂರಲ್ಲಿ ಏರ್ ಷೋ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು : ಬೆಂಗಳೂರಿನ ಆಕಾಶದಲ್ಲಿ ಮತ್ತೊಮ್ಮೆ ಯುದ್ಧವಿಮಾನಗಳ ಭರ್ಜರಿ ಕಸರತ್ತು, ಅತ್ಯಾಧುನಿಕ ವಿಮಾನಗಳ ಹಾರಾಟ ಹಾಗೂ ವೈಮಾನಿಕ ತಂತ್ರಜ್ಞಾನದ ಅದ್ದೂರಿ ಪ್ರದರ್ಶನಕ್ಕೆ ವೇದಿಕೆ ಸಿದ್ಧವಾಗುತ್ತಿದೆ. ಏಷ್ಯಾದ ಪ್ರಮುಖ ವೈಮಾನಿಕ ಪ್ರದರ್ಶನಗಳಲ್ಲಿ ಒಂದಾದ ಏರೋ ಇಂಡಿಂ-ಯಾ 2027ರ ದಿನಾಂಕವನ್ನು ಕೇಂದ್ರ ರಕ್ಷಣಾ ಸಚಿವಾಲಯ ಅಧಿಕೃತವಾಗಿ ಪ್ರಕಟಿಸಿದ್ದು, 2027ರ ಫೆಬ್ರವರಿ 8ರಿಂದ 12ರವರೆಗೆ ಐದು ದಿನಗಳ ಕಾಲ ಯಲಹಂಕ ವಾಯುಪಡೆ ನಿಲ್ದಾಣದಲ್ಲಿ 16ನೇ ಆವೃತ್ತಿಯ ಏರ್‌ಶೋ ನಡೆಯಲಿದೆ.**

ಪ್ರತಿ ಎರಡು ವರ್ಷಕ್ಕೊಮ್ಮೆ ನಡೆಯುವ ಏರೋ ಇಂಡಿಯಾ ಮತ್ತೊಮ್ಮೆ ಬೆಂಗಳೂರಿಗೆ ಮರಳುತ್ತಿರುವುದು ನಗರದ ವೈಮಾನಿಕ ಕ್ಷೇತ್ರದ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ. ದೇಶದ ರಕ್ಷಣಾ



ಉತ್ಪಾದನೆ, ಏರೋಸ್ಪೇಸ್ ತಂತ್ರಜ್ಞಾನ, ಸ್ವದೇಶಿ ಆವಿಷ್ಕಾರ ಹಾಗೂ ರಕ್ಷಣಾ ರಫ್ತು ಸಾಮಥ-'ರ್ಯವನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸಲು ಈ ಬಾರಿಯ ಪ್ರದರ್ಶನ ಪ್ರಮುಖ ವೇದಿಕೆಯಾಗಲಿದೆ.

ಐದು ದಿನಗಳ ಭರ್ಜರಿ ಪ್ರದರ್ಶನ : ಫೆ. 8ರಿಂದ 12ರವರೆಗೆ ನಡೆಯಲಿರುವ ಏರೋ ಇಂಡಿಯಾ 2027ರಲ್ಲಿ ಜಾಗತಿಕ ಏರೋಸ್ಪೇಸ್ ಮತ್ತು ರಕ್ಷಣಾ ಕಂಪನಿಗಳು, ನೀತಿ ನಿರೂಪಕರು, ತಂತ್ರಜ್ಞಾನ

**ಏರೋ ಇಂಡಿಯಾ 2027**
**ದಿನಾಂಕ : ಫೆ. 8?12, 2027**
**ಸ್ಥಳ: ಏರ್ ಫೋರ್ಸ್ ಸ್ಟೇಷನ್, ಯಲಹಂಕ**
**ಆವೃತ್ತಿ : 16ನೇ**
**ಅವಧಿ : ಐದು ದಿನ**
**ಆಯೋಜಕರು : ರಕ್ಷಣಾ ಉತ್ಪಾದನಾ ಇಲಾಖೆ, ರಕ್ಷಣಾ ಸಚಿವಾಲಯ**
**ನೋಂದಣಿ : ಸೆ. 3, 2026ರಿಂದ ಆನ್‌ಲೈನ್**
**ನೋಡಲ್ ಏಜೆನ್ಸಿ : ಊಂಐ**
**ಮುಖ್ಯ ಉದ್ದೇಶ : ಏರೋಸ್ಪೇಸ್, ರಕ್ಷಣಾ ಉತ್ಪಾದನೆ, ತಂತ್ರಜ್ಞಾನ ಮತ್ತು ರಫ್ತು ಸಾಮರ್ಥ್ಯದ ಪ್ರದರ್ಶನ.**

ತಜ್ಞರು, ನವೋದ್ಯಮಿಗಳು, ಉದ್ಯಮ ಪ್ರತಿನಿಧಿಗಳು ಹಾಗೂ ರಕ್ಷಣಾ ಪಡೆಗಳ ಸಿಬ್ಬಂದಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ವೈಮಾನಿಕ ಉತ್ಪನ್ನಗಳ ಪ್ರದರ್ಶನದ ಜತೆಗೆ ತಂತ್ರಜ್ಞಾನ ಪ್ರದರ್ಶನ, ಉದ್ಯಮ-ಉದ್ಯಮ ಮಾತುಕತೆ, ಸರ್ಕಾರ-ಉದ್ಯಮ ಸಂವಾದ ಹಾಗೂ ವಿವಿಧ ಸಹಭಾಗಿತ್ವದ ಅವಕಾಶಗಳು ಇರಲಿವೆ. ಇದರ ಪ್ರಮುಖ ಆಕರ್ಷಣೆಯಾಗಿರುವ ವೈಮಾನಿಕ ಪ್ರದರ್ಶನದಲ್ಲೂ ಭಾರತೀಯ ವಾಯುಪಡೆ ಸೇ-ರಿದಂತೆ ವಿವಿಧ ದೇಶಗಳ ಫ್ಲೈಯಿಂಗ್ ತಂಡಗಳು ಭಾಗವಹಿಸುವ ನಿರೀಕ್ಷೆಯಿದೆ. ಅತ್ಯಾಧುನಿಕ ವಿಮಾನಗಳು ಮತ್ತು ವೈಮಾನಿಕ ಸಾಮರ್ಥ್ಯಗಳ ಪ್ರದರ್ಶನ ಪ್ರೇಕ್ಷಕರಿಗೆ ರೋಮಾಂಚನ ಮೂಡಿಸಲಿದೆ.

ರಕ್ಷಣಾ ರಫ್ತಿಗೆ ಒತ್ತು : ಭಾರತವನ್ನು ಜಾಗತಿಕ ರಕ್ಷಣಾ ಉತ್ಪಾದನಾ ಕೇಂದ್ರವನ್ನಾಗಿ ರೂಪಿಸುವ ಪ್ರಯತ್ನದ ಭಾಗವಾಗಿ ಏರೋ ಇಂಡಿಯಾ 2027ಕ್ಕೆ ವಿಶೇಷ ಮಹತ್ವ ನೀಡಲಾಗಿದೆ. 'ಆತ್ಮನಿರ್ಭರ ಭಾರತ'ದ ಆಶಯಕ್ಕೆ ಪೂರಕವಾಗಿ ದೇಶೀಯ ರಕ್ಷಣಾ ಕೈಗಾರಿಕೆಗಳು, ಎಂಎಸ್-ಎಂಇಗಳು ಮತ್ತು ಸ್ಟಾರ್ಟ್‌ಅಪ್‌ಗಳಿಗೆ ಜಾಗತಿಕ ಕಂಪನಿಗಳೊಂದಿಗೆ ಸಂಪರ್ಕ ಸಾಧಿಸಲು ಇದು ಅವಕಾಶ ಕಲ್ಪಿಸಲಿದೆ. ರಕ್ಷಣಾ ಉತ್ಪನ್ನಗಳ ರಫ್ತು, ಹೂಡಿಕೆ, ತಂತ್ರಜ್ಞಾನ ಸಹಕಾರ ಮತ್ತು ಜಾಗತಿ-ಕ ಪೂರೈಕೆ ಸರಪಳಿಯಲ್ಲಿ ಭಾರತದ ಪಾಲುದಾ-ರಿಕೆಯನ್ನು ಹೆಚ್ಚಿಸುವ ಉದ್ದೇಶವೂ ಇದೆ.

ಸೆ. 3ರಿಂದ ನೋಂದಣಿ : ಏರೋ ಇಂಡಿಯಾ 2027ರ ಪ್ರದರ್ಶನದಲ್ಲಿ ಭಾಗವಹಿಸಲು ಆನ್‌ಲೈನ್ ನೋಂದಣಿ ಹಾಗೂ ಪ್ರದರ್ಶನ ಸ್ಥಳ ಕಾಯ್ದಿರಿಸುವ ಪ್ರಕ್ರಿಯೆ ಸೆಪ್ಟೆಂಬರ್ 3, 2026ರಿಂದ ಆರಂಭವಾಗಲಿದೆ. ಇದಕ್ಕಾಗಿ ಪ್ರತ್ಯೇಕ ವೆಬ್ ಪೋರ್ಟಲ್ ಸಿದ್ಧಪಡಿಸಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಯಲಹಂಕ ವಾಯುನೆಲೆಯಲ್ಲಿ ಈಗಾಗಲೇ ಹಲವು ಆವೃತ್ತಿಗಳ ಏರೋ ಇಂಡಿಂ-ಯಾ ಯಶಸ್ವಿಯಾಗಿ ನಡೆದಿದ್ದು, 2027ರ ಆವೃತ್ತಿಯ ಸಿದ್ಧತೆಗಳೂ ಆರಂಭವಾಗಿವೆ. ರಕ್ಷಣಾ ಸಚಿವಾಲಯದ ರಕ್ಷಣಾ ಉತ್ಪಾದನಾ ಇಲಾಖೆಯ ಪರವಾಗಿ ಹಿಂದೂಸ್ತಾನ್ ಏರೋನಾಟಿ-ಕ್ಸ್ ಲಿಮಿಟೆಡ್ (ಊಂಐ) ಪ್ರಮುಖ ನೋಡಲ್ ಏಜೆನ್ಸಿಯಾಗಿ ಕಾರ್ಯನಿರ್ವಹಿಸಲಿದೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINT-ERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101